₹ 4 ಪುಟ: 4 ಸಂಪುಟ: 4 ಸಂಚಿಕೆ 61 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 61 Thursday, 20, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

### ಜನಸಂಖ್ಯೆಯಲ್ಲಿ ಚೀನಾ ಹಿಂದಿಕ್ಕಿದ ಭಾರತ

## ಜನಸಂಖ್ಯೆಯಲ್ಲಿ ಭಾರತ ನಂ. 1

ದೆಹಲಿ: ಭಾರತವು ಇಂದು 142.86 ಕೋಟಿ ಜನರೊಂದಿಗೆ ಜನಸಂಖ್ಯೆಯಲ್ಲಿ ಚೀನಾವನ್ನು ಹಿಂದಿಕ್ಕಿ ವಿಶ್ವದಲ್ಲೇ ಮೊದಲ ಸ್ಥಾನಕ್ಕೇರಿದೆ.

ವಿಶ್ವಸಂಸ್ಥೆಯ ಇತ್ತೀಚಿನ ಅಂಕಿಅಂಶಗಳ ಪ್ರಕಾರ ಭಾರತವು 142.86 ಕೋಟಿ ಜನಸಂಖ್ಯೆ ಹೊಂದುವ ಮೂಲಕ ಮೊದಲ ಸ್ಥಾನಕ್ಕೆ ಏರಿದ್ದು, 142.57 ಕೋಟಿ ಜನಸಂಖ್ಯೆಯನ್ನು ಹೊಂದುವ ಮೂಲಕ ಚೀನಾ ಎರಡನೇ ಸ್ಥಾನಕ್ಕೆ ಇಳಿದಿದೆ.

ವಿಶ್ವಸಂಸ್ಥೆಯ ಯುಎನ್‌ಎಫ್ ಪಿಎ ವರದಿಯ ಪ್ರಕಾರ, ಭಾರತದ ಜನಸಂಖ್ಯೆಯಲ್ಲಿ 25% ಪಾಲು 0–14 ವರ್ಷದವರಾಗಿದ್ದಾರೆ. 10–19



ವರ್ಷ ವಯೋಮಿತಿಯವರು 18% ಮಂದಿ ಇದ್ದಾರೆ.

10ರಿಂದ 24 ವರ್ಷ ವಯೋಮಿತಿಯವರು 26% ಇದ್ದಾರೆ. 15–64 ವರ್ಷ ವಯೋಮಿತಿಯವರು 68% ಇದ್ದಾರೆ. 65 ವರ್ಷಕ್ಕಿಂತ ಮೇಲಿನವರು 7% ಇದ್ದಾರೆ.

ಮುಂಬರುವ ಮೂರು ದಶಕಗಳಲ್ಲಿ ಭಾರತದ ಜನಸಂಖ್ಯೆ 165 ಕೋಟಿಗೆ ಏರಿಕೆಯಾಗಲಿದ್ದು, ಬಳಿಕ ಇಳಿಕೆಯಾಗುವ ಸಾಧ್ಯತೆ ಇದೆ ಎಂದು ಅಂದಾಜಿಸಲಾಗಿದೆ. ಜನಸಂಖ್ಯೆಯಲ್ಲಿ ಅಮೆರಿಕ ಮೂರನೇ ಸ್ಥಾನದಲ್ಲಿದ್ದು, 34 ಕೋಟಿಯಷ್ಟಿದೆ. ಏಷ್ಯಾದ ಮೂರನೇ ಅತಿ ದೊಡ್ಡ ಎಕಾನಮಿಯಾಗಿರುವ ಭಾರತವು ಜಗತ್ತಿನ ಜನಸಂಖ್ಯೆಯ ಐದನೇ ಒಂದರಷ್ಟು ಪಾಲನ್ನು ಹೊಂದಿದೆ. ಅಗಾಧ ಮಾನವ ಸಂಪನ್ಮೂಲದಿಂದಾಗಿ ಭಾರತ ವಿಶಾಲವಾದ ಮಾರುಕಟ್ಟೆಯನ್ನೂ ಸೃಷ್ಟಿಸಿದೆ. ವಿದೇಶಗಳಲ್ಲೂ ಭಾರತೀಯರು ದುಡಿದು ತವರಿಗೆ ರವಾನಿಸುತ್ತಿದ್ದಾರೆ. ಆದರೆ ಇದೇ ವೇಳೆ ಹೆಚ್ಚುತ್ತಿರುವ ಜನಸಂಖ್ಯೆಯ ಪರಿಣಾಮ ಎಲ್ಲರಿಗೂ ಉದ್ಯೋಗಾವಕಾಶಗಳನ್ನು ನೀಡುವುದು ಸವಾಲಾಗಿ ಪರಿಣಮಿಸಿದೆ.

## ಬಿಜೆಪಿ ಮತ್ತೆ ಅಧಿಕಾರಕ್ಕೆ: ಬೊಮ್ಮಾಯಿ ವಿಶ್ವಾಸ

ಹಾವೇರಿ: ಬಿಜೆಪಿ ಮೇ 13ರಂದು 125ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಮತ್ತೆ ಅಧಿಕಾರಕ್ಕೆ ಬರಲಿದೆ. ಮತ್ತೆ ಕನ್ನಡಮಾತೆಯ ಸೇವೆ ಮಾಡಲಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು.

ಶಿಗ್ಗಾವಿಯಲ್ಲಿ ಬುಧವಾರ ನಾಮಪತ್ರ ಸಲ್ಲಿಕೆ ಹಿನ್ನಲೆ ಆಯೋಜಿಸಿದ್ದ ಬಹಿರಂಗ ಸಮಾವೇಶದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ರಾಜ್ಯ ಸರಕಾರ ಎಲ್ಲ ರಂಗಗಳಲ್ಲೂ ವಿಫಲವಾಗಿತ್ತು. ಮೂಲಸೌಕರ್ಯದ ಕೊರತೆ, ನೀರಿನ ಸಮಸ್ಯೆ ವ್ಯಾಪಕವಾಗಿತ್ತು ಎಂದು ಟೀಕಿಸಿದರು.

ಕ್ಷೇತ್ರದಲ್ಲಿ 2 ಏತ ನೀರಾವರಿ ಯೋಜನೆ ಅನುಷ್ಠಾನದ ಮೂಲಕ 100ಕ್ಕೂ ಹೆಚ್ಚು ಕೆರೆಗಳಿಗೆ ನೀರು ತುಂಬಿಸಲಾಗಿದೆ. ಗ್ರಾಮೀಣ, ಜಿಲ್ಲಾ ರಸ್ತೆ, ರಾಜ್ಯ, ರಾಷ್ಟ್ರೀಯ ಹೆದ್ದಾರಿ ಸೇರಿ 2 ಸಾವಿರ ಕಿಮೀ ರಸ್ತೆಗಳ ನಿರ್ಮಾಣವಾಗಿದೆ ಎಂದು ಹೇಳಿದರು.

ಬಡತನ ಶಾಪವಲ್ಲ, ಸಾಯುವವರೆಗೆ ಬಡತನ ಇರಬೇಕಿಲ್ಲ. ಪ್ರಾಮಾಣಿಕತೆಯಿಂದ ದುಡಿಯಲು ಅವಕಾಶ ಕೊಟ್ಟಿದ್ದೇವೆ. ಈ ಭಾಗದಲ್ಲಿ ಅತಿ ಹೆಚ್ಚು ಮನೆಗಳನ್ನು ನಿರ್ಮಿಸಿ



ಕೊಡಲಾಗುತ್ತಿದೆ. ಶಹರಗಳ ಸಂಪೂರ್ಣ ಅಭಿವೃದ್ಧಿ, ಪ್ರತಿ ಮನೆಗೆ ನಳದಿಂದ ನೀರು ಕೊಡುತ್ತಿದ್ದೇವೆ. ಮೋದಿಜಿ ಅವರ ನೇತೃತ್ವದ ಕೇಂದ್ರ ಸರಕಾರವು ಜಲಜೀವನ್ ಮಿಷನ್ ಅಡಿಯಲ್ಲಿ ಎಲ್ಲ ಹಳ್ಳಿಗಳಿಗೂ ನೀರಿನ ಸೌಕರ್ಯ ಕೊಡುತ್ತಿದ್ದೇವೆ. ಹೀಗಾಗಿ ಅಭಿವೃದ್ಧಿಗಾಗಿ ಜನರು ನಮಗೆ ಆಶೀರ್ವಾದ ಮಾಡಲಿದ್ದಾರೆ ಎಂದು ಹೇಳಿದರು.

ನನ್ನಲ್ಲಿ ಆತ್ಮಸ್ಥೈರ್ಯ ಇದೆ. ಪ್ರಾಮಾಣಿಕ ಸೇವೆಯ ಕುರಿತು ನಂಬಿಕೆ ಇದೆ. ಆಯುರ್ವೇದ ಆಸ್ಪತ್ರೆ, ವೆಟರಿನರಿ ಪಾಲಿಟೆಕ್ನಿಕ್, ಜವಳಿ ಪಾರ್ಕ್ ಟೈಲ್ ಸೇರಿ ಅನೇಕ ಅಭಿವೃದ್ಧಿ ಕಾರ್ಯ ಆಗಿದೆ. ಬಂಕಾಪುರವನ್ನು ಮುಂದಿನ ದಿನಗಳಲ್ಲಿ ತಾಲ್ಲೂಕಾಗಲಿದೆ ಎಂದು ತಿಳಿಸಿದರು.

### ನಾಮ್ಕೆವಾಸ್ತೆ ಅಲ್ಲ ಕಾಮ್ಕೆವಾಸ್ತೆ ಸಿಎಂ



ಇಂದು ಸುಂದರವಾಗಿ ಸುಸ್ವಾಗತ ನೀಡಿ ಪ್ರೀತಿ ತೋರಿದ್ದೀರಿ. ಬೊಮ್ಮಾಯಿ ಮಾಮ ಅವರು ಕಡಿಮೆ ಅವಧಿಯಲ್ಲಿ ತುಂಬ ಕೆಲಸ ಮಾಡಿದ್ದಾರೆ. ಇವರು ನಾಮ್ಕೆವಾಸ್ತೆ ಅಲ್ಲ ಕಾಮ್ಕೆವಾಸ್ತೆ ಸಿಎಂ ಅವರು ಎಂದು ನಾಯಕ ನಟ ಕಿಚ್ಚ ಸುದೀಪ ಹೇಳಿದರು.

ನನ್ನ ಸಾವಾದರೆ ಶಿಗ್ಗಾವಿ ಮಣ್ಣಿನಲ್ಲೇ ಅಂತ್ಯಸಂಸ್ಕಾರ ಮಾಡಿ ಎಂದು ಮನವಿ ಮಾಡಿದರು.

ಚಿತ್ರನಟ ಕಿಚ್ಚ ಸುದೀಪ್ ಮಾತನಾಡಿ, ಜನಮನ ಗೆದ್ದ ಸಿಎಂ ಬೊಮ್ಮಾಯಿ ಮಾಮ. ಅವರಿಗೆ ಕೆಲಸ ಮಾಡಲು ಇನ್ನಷ್ಟು ಸಮಯ ಬೇಕಿದೆ. ಜನರಿಗೆ ಒಳಿತಿಗಾಗಿ ಅವರನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ನಾನು ಒಬ್ಬ ಭಾರತೀಯನಾಗಿ ಪ್ರಧಾನಿ ಮೋದಿ ಅವರ ಕೆಲಸಗಳನ್ನು ಮೆಚ್ಚುತ್ತೇನೆ. ನಿಮ್ಮ ನಂಬಿಕೆ ಇದ್ದರೆ ಕೆಲಸ ಚೆನ್ನಾಗಿ ಆಗುತ್ತದೆ. ಗೆದ್ದೇ ಗೆಲ್ಲುವೆ ಒಂದು ದಿನ ಗೆಲ್ಲಲೇ ಬೇಕು ಒಳ್ಳೆತನ ಹಾಡನ್ನು ಅವರು ಉದಾಹರಿಸಿದರು.

ಇದಕ್ಕೂ ಮೊದಲು ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾರವರು ಶಿಗ್ಗಾವಿಯಲ್ಲಿ ಸಿಎಂ ಬಸರಾಜ ಬೊಮ್ಮಾಯಿಯೊಂದಿಗೆ ಬೃಹತ್ ರೋಡ್ ಶೋ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಈ ವೇಳೆ ಸಚಿವರಾದ ಬಿ.ಸಿ.ಪಾಟೀಲ, ಗೋವಿಂದ ಕಾರಜೋಳ, ಮುರಗೇಶ ನಿರಾಣಿ, ಚಿತ್ರ ನಟ ಸುದೀಪ್, ಶಿಸ್ತು ಸಮಿತಿಯ ಅಧ್ಯಕ್ಷ ಲಿಂಗರಾಜ ಪಾಟೀಲ ಇದ್ದರು.

ಓಡಿ ಹೋಗುವ ಮುಖ್ಯಮಂತ್ರಿ ನಾನಲ್ಲ.. ಜೀವನದ ಕೊನೆ ಉಸಿರು ಇರುವವರೆಗೂ ನಿಮ್ಮ ಸೇವೆ ಮಾಡುತ್ತೇನೆ. ಕ್ಷೇತ್ರ ಬದಲಿಸುವ, ಓಡಿ ಹೋಗುವ ಮುಖ್ಯಮಂತ್ರಿ ನಾನಲ್ಲ. ಏನೇ ಆದರೂ ನನ್ನ ಜನರ ಮುಂದೆ ತೀರ್ಮಾನ ಆಗಬೇಕು. ನೀವೇ ಮಾಲೀಕರು ಎಂದು ಬಸವರಾಜ ಬೊಮ್ಮಾಯಿ ತಿಳಿಸಿದರು.

## 50 ಸಾವಿರಕ್ಕೂ ಹೆಚ್ಚು ಮತ ಪಡೆಯುವ ಮೂಲಕ ಬಿಜೆಪಿಗೆ ತಕ್ಕ ಕಲಿಸುತ್ತೇನೆ: ಜಗದೀಶ್ ಶೆಟ್ಟರ್



ಹುಬ್ಬಳ್ಳಿ: ಹು–ಧಾ ಸೆಂಟ್ರಲ್ ವಿಧಾನಸಭಾ ಚುನಾವಣೆಯಲ್ಲಿ ನಾನು 50 ಸಾವಿರಕ್ಕೂ ಹೆಚ್ಚು ಮತಗಳ ಪಡೆಯುವ ಮೂಲಕ ಜನತೆ ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹಾಗೂ ಹು–ಧಾ ಸೆಂಟ್ರಲ್ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಜಗದೀಶ್ ಶೆಟ್ಟರ್ ವಿಶ್ವಾಸ ವ್ಯಕ್ತಪಡಿಸಿದರು.

ಹು–ಧಾ ಸೆಂಟ್ರಲ್ ವಿಧಾನ ಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ನಗರದ ಹು–ಧಾ ಪಾಲಿಕೆಯಲ್ಲಿ ಚುನಾವಣಾ ಅಧಿಕಾರಿಗಳಿಗೆ ನಾಮ ಪತ್ರ ಸಲ್ಲಿಕೆ ಮಾಡಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷಾಂತರ ಮಾಡಿದವರು ಯಾರು ಗೆಲ್ಲುವುದಿಲ್ಲ ಎಂಬ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಹಿಂದೆ ಏನು ಆಗಿದೆ ಎಂಬುದು ನನಗೆ ಗೊತ್ತಿದೆ. ಹು–ಧಾ ಸೆಂಟ್ರಲ್ ಕ್ಷೇತ್ರದ ವಿಚಾರವಾಗಿ ನನ್ನನ್ನು ಬಿಜೆಪಿ ಮನೆಯಿಂದ ಹೊರಹಾಕಿದ್ದಾರೆ. ಆದರೇ ಈ ಚುನಾವಣೆಯಲ್ಲಿ ಜನತೆ ತಕ್ಕ ಉತ್ತರ ಕೊಡಲಿದ್ದಾರೆಂದು ಬಿಜೆಪಿ ಗೆ ಟಾಂಗ್ ಕೊಟ್ಟರು.

ಚುನಾವಣೆ ಯಲ್ಲಿ ಸಹೋದರರು, ಗುರು–ಶಿಷ್ಯರು ಎಂಬುದು ನಡದೇ ನಡೆಯುತ್ತದೆ ಎಂಬುದು ಸಾಮಾನ್ಯ. ಆದರೇ ಮುಖ್ಯವಾಗಿರೋದು ಮತದಾರರ ಆಶೀರ್ವಾದ, ಹೀಗಾಗಿ ನನಗೆ ಹುಬ್ಬಳ್ಳಿ ಹಾಗೂ ರಾಜ್ಯದ ಜನರ ಆಶೀರ್ವಾದ ಇದ್ದು, ಅದರ ಜೊತೆಗೆ ಕಾಂಗ್ರೆಸ್ ಮುಖಂಡರ ಬೆಂಬಲವೂ ಇದೆ.ಈ ನಿಟ್ಟಿನಲ್ಲಿ ಹುಧಾ ಸೆಂಟ್ರಲ್ ಕ್ಷೇತ್ರದಲ್ಲಿ ಈ ಹಿಂದೆ 6 ಬಾರಿ ಗೆದ್ದಾಗಲೂ 25 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದೆ, ಈ ಬಾರಿ ಕಾಂಗ್ರೆಸ್ ಅಭ್ಯರ್ಥಿಯಾಗಿ 7 ನೇ ಬಾರಿ ಕಣಕ್ಕೆ ಇಳಿದಿದ್ದು, ಸದ್ಯದ ವಾತಾವರಣ ನೋಡಿದರೆ ನಾನು ಐತಿಹಾಸಿಕ ಗೆಲುವು ಸಾಧಿಸಲಿದ್ದೇನೆ ಎಂದು ಅವರು ನುಡಿದರು.ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ನಾನು ನಾಮ ಪತ್ರ ಸಲ್ಲಿಸಿದ್ದು, ನನ್ನೊಂದಿಗೆ ಪಕ್ಷದ ಹಿರಿಯರಾದ ಆರ್. ವಿ. ದೇಶಪಾಂಡೆ, ಎಂ.ಬಿ.ಪಾಟೀಲ್, ಎ.ಎಂ.ಹಿಂಡಸಗೇರಿ, ಪ್ರಸಾದ್ ಅಬ್ಬಯ್ಯ, ಅನಿಲಕುಮಾರ್ ಪಾಟೀಲ್, ಅಲ್ತಾಫ್ ಹಳ್ಳೂರ ಸೇರಿದಂತೆ ಇನ್ನಿತರ ನಾಯಕರುಗಳು ಬೆಂಬಲ ನೀಡಿದರು ಎಂದರು.

## ಸಿದ್ದರಾಮಯ್ಯ ನಾಮಪತ್ರ ಸಲ್ಲಿಕೆಗೆ ಸತೀಶ್ ಜಾರಕಿಹೊಳಿ ಸಾಥ್

ಮೈಸೂರು: ವರುಣಾ ಕ್ಷೇತ್ರದಿಂದ ಕಣಕ್ಕಿಳಿದಿರುವ ಮಾಜಿ ಸಿಎಂ ಸಿದ್ದರಾಮಯ್ಯ ಅವರಿಂದು ಮೈಸೂರಿನಲ್ಲಿ ನಾಮಪತ್ರ ಸಲ್ಲಿಸಿದ್ದಾರೆ.

ಬುಧವಾರ ಬೆಳಗ್ಗೆ ಹುಟ್ಟೂರು ಸಿದ್ದರಾಮನಹುಂಡಿಗೆ ತೆರಳಿದ್ದ ಸಿದ್ದರಾಮಯ್ಯ ಅವರು ಮನೆ ದೇವರು ಸಿದ್ದರಾಮೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿದ್ದಾರೆ. ನಂತರ ಚಾಮುಂಡಿಬೆಟ್ಟದಲ್ಲಿ ಚಾಮುಂಡೇಶ್ವರಿ ದೇವಿ ಹಾಗೂ ಉತ್ತನಹಳ್ಳಿಯ ಜ್ವಾಲಾಮುಖಿ ತ್ರಿಪುರಸುಂದರಿ ದೇವಿಗೂ ಭಕ್ತಿಭಾವದಿಂದ ಪೂಜೆ ಸಲ್ಲಿಸಿದ್ದಾರೆ.

ಬಳಿಕ ನಂಜಗೂಡಿನಲ್ಲಿ ನಡೆದ ಸಮಾವೇಶದಲ್ಲಿ ಮಾತನಾಡಿದ ಅವರು, ಇದು ನನಗೆ ಕೊನೆಯ ಚುನಾವಣೆ, ಹಾಗಾಗಿ ಬಹುಮತದಿಂದ ಗೆಲ್ಲಿಸುವಂತೆ ಮನವಿ ಮಾಡಿದ್ದಾರೆ. ಇದು ನನ್ನ ಕೊನೆಯ ಚುನಾವಣೆ, ಆಮೇಲೆ ಯತೀಂದ್ರ, ಧವನ್ ರಾಕೇಶ್ ಇದ್ದಾರೆ. ಧವನ್ ರಾಜಕೀಯಕ್ಕೆ ಬರಲು ಇನ್ನೂ 8 ವರ್ಷ ಬೇಕು. ಓದು ಮುಗಿಸಿದ ನಂತರ ರಾಜಕಾರಣಕ್ಕೆ ಬರುತ್ತಾನೆ. ರಾಕೇಶ್ ಮೇಲೆ ಇದ್ದ ಪ್ರೀತಿಯನ್ನ ಅವನ ಮಗನ ಮೇಲೂ ತೋರಿಸುತ್ತಿದ್ದೀರಿ ಅದಕ್ಕೆ ಧನ್ಯವಾದಗಳು ಎಂದು ಹೇಳಿದ್ದಾರೆ.

ಬಿಜೆಪಿ ಅವರು ಬೆಂಗಳೂರಿನ ನಿವಾಸಿ ಸೋಮಣ್ಣ



ಅವರನ್ನ ಕಣಕ್ಕಿಳಿಸಿದೆ. ಬಿಜೆಪಿ–ಜೆಡಿಎಸ್ ಒಳ ಒಪ್ಪಂದ ಮಾಡಿಕೊಂಡಿದೆ. ಜೆಡಿಎಸ್ ಅಭ್ಯರ್ಥಿ ಭಾರತಿ ಶಂಕರ್ ನನ್ನು ಕಣಕ್ಕೆ ಇಳಿಸಿರೋದು ದಲಿತರ ಮತ ಛಿದ್ರ ಮಾಡುವ ಷಡ್ಯಂತ್ರ. ನನ್ನನ್ನ ಸೋಲಿಸಲು ಬಿಜೆಪಿ–ಜೆಡಿಎಸ್ ಷಡ್ಯಂತ್ರ ಮಾಡುತ್ತಿದ್ದಾರೆ ಎಂದು ನುಡಿದಿದ್ದಾರೆ.

ಬಿಜೆಪಿಯಲ್ಲಿ ಹಿರಿಯರಿಗೆ ಗೌರವವಿಲ್ಲ, ಜಗದೀಶ್ ಶೆಟ್ಟರ್, ಲಕ್ಷ್ಮಣ ಸವದಿಗೆ ಟಿಕೆಟ್ ಕೊಡಲಿಲ್ಲ. ಇಡೀ ರಾಜ್ಯದಲ್ಲಿ ಈಗ ಕಾಂಗ್ರೆಸ್ ಪರ ಗಾಳಿ ಬೀಸಿದೆ. ವರುಣಾ ಜನತೆಗೆ ಎಷ್ಟೇ ಕೋಟಿ ಕೊಟ್ಟರೂ ಅದನ್ನ ಕಾಲಕಸದಂತೆ ಕಾಣುತ್ತಾರೆ ಅನ್ನೋದು ನನಗೆ ಗೊತ್ತಿದೆ. ಇದು ನನ್ನ ಕೊನೆಯ ಚುನಾವಣೆ, ನಂತರ ಚುನಾವಣಾ ರಾಜಕೀಯದಿಂದ ನಿವೃತ್ತಿ ಆಗುತ್ತೇನೆ. ಹಾಗಾಗಿ ಈ ಬಾರಿ 1 ಲಕ್ಷ ಮತಗಳ ಅಂತರದಿಂದ ನನ್ನನ್ನ ಗೆಲ್ಲಿಸಬೇಕು ಎಂದು ಕೋರಿದ್ದಾರೆ.




ವರುಣಾ ವಿಧಾನಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸಿದ್ದರಾಮಯ್ಯ ಅವರು ಬುಧವಾರ ನಂಜನಗೂಡಿನ ತಾಕೂಕು ಪಂಚಾಯಿತಿ ಕಚೇರಿಯಲ್ಲಿ ನಾಮಪತ್ರ ಸಲ್ಲಿಸಿದರು.

## ಅರಭಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಶಾಸಕ ಬಾಲಚಂದ್ರ ಜಾರಕಿಹೊಳಿ ನಾಮಪತ್ರ ಸಲ್ಲಿಕೆ

ಮೂಡಲಗಿ: ಅರಭಾವಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಬುಧವಾರ ಚುನಾವಣಾಧಿಕಾರಿಗಳಿಗೆ ತಮ್ಮನಾಮಪತ್ರ ಸಲ್ಲಿಸಿದರು.

ಬುಧವಾರದಂದು ಇಲ್ಲಿನ ತಹಶೀಲ್ದಾರ ಕಛೇರಿಗೆ ತೆರಳಿದ ಬಾಲಚಂದ್ರ ಜಾರಕಿಹೊಳಿ ಅವರು ಚುನಾವಣಾಧಿ ಕಾರಿಯಾಗಿರುವ ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪೂರ ಅವರಿಗೆ ಬಿಜೆಪಿ ಅಧಿಕೃತ ಅಭ್ಯರ್ಥಿಯಾಗಿ ಉಮೇದುವಾರಿಕೆ ಸಲ್ಲಿಸಿದರು.



ಬುಧವಾರ ಮುಂಜಾನೆ 11 ಗಂಟೆಗೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಅತ್ಯಂತ ಸರಳವಾಗಿ ತಮ್ಮನಾಲ್ವರು ಸೂಚಕರೊಂದಿಗೆ ಒಂದು ನಾಮಪತ್ರ ಸಲ್ಲಿಸಿದರು.ಈ ಸಂದರ್ಭದಲ್ಲಿ ಪ್ರಭಾಶುಗರ ನಿರ್ದೇಶಕರಾದ ಬಸಗೌಡ ಪಾಟೀಲ, ಕೆಂಚನಗೌಡ ಪಾಟೀಲ, ಜಿಪಂ ಮಾಜಿ ಸದಸ್ಯರಾದ ಡಾ.ರಾಜೇಂದ್ರ ಸಣ್ಣಕ್ಕಿ, ಶಂಕರ ಬಿಲಕುಂದಿ ಅವರು ಉಪಸ್ಥಿತರಿದ್ದರು.




ಬೆಳಗಾವಿ: ಬೆಳಗಾವಿಯ ದಕ್ಷಿಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಭಾವತಿ ಮಾಸ್ತಮರಡಿ ಅವರು ಇವತ್ತು ತಮ್ಮ ನಗರದ ಕಾಂಗ್ರೆಸ್ ಭವನ ದಿಂದ ಕಾರ್ಯಕರ್ತರು ಹಾಗೂ ಬೆಂಬಲಿಗರೊಂದಿಗೆ ನಾಮ ಪತ್ರವನ್ನು ಮಹಾನಗರ ಪಾಲಿಕೆ ಬೆಳಗಾವಿಯಲ್ಲಿ ಸಲಿಸಿದರು.

## ಮಾರುತಿ ಅಷ್ಟಗಿ ನಾಮಪತ್ರ ಸಲ್ಲಿಕೆ




ಯಮಕನಮರಡಿ: ಕ್ಷೇತ್ರದ ಜೆ ಡಿ ಎಸ್ ಅಭ್ಯರ್ಥಿ ಯಾಗಿ ಮಾರುತಿ ಅಷ್ಟಗಿ ಇಂದು ನಾಮಪತ್ರ ಸಲ್ಲಿಸಿದರು.

ಬಿ ಜೆ ಪಿ ಪಕ್ಷದ ಟಿಕೇಟ್ ವಂಚಿತ ಮಾರುತಿ ಅಷ್ಟಗಿ ಬಂಡಾಯವಾಗಿ ಜೆ ಡಿ ಎಸ್ ಪಕ್ಷದ ವತಿಯಿಂದ ತಮ್ಮ ಬೆಂಬಲಿಗರಾದ ಪರಶುರಾ ಬಸನಾಯಿಕ, ಅಣ್ಣಾಸಾಹೇಬ ಬೆಣವಾಡಿ ರವೀಂದ್ರ ಕುರಬರ, ಜಾಕೀರ ನದಾಫ್ ರೊಂದಿಗೆ ಚುನಾವಣೆ ಅಧಿಕಾರಿ ಬಲರಾಮ್ ಚವ್ಹಾನ ಮತ್ತು ವಿಲಾಸರಾಜ್ ಅವರಿಗೆ ನಾಮಪತ್ರ ಸಲ್ಲಿಸಿದರು.

ನಂತರ ಮಾದ್ಯಮಗಳೊಂದಿಗೆ ಮಾತನಾಡಿದ ಮಾರುತಿ ಅಷ್ಟಗಿ ಬಿ ಜೆ ಪಿ ಪಕ್ಷದಿಂದ ನನಗೆ ಅನ್ಯಾವಾಗಿದೆ ಗೆಲುವಿನ ಅಂಚಿನಲ್ಲಿ ಇದ್ದ ನನಗೆ ಹೊಂದಾಣಿಕೆ ರಾಜಕಾರಣ ಮಾಡುವ ಮೂಲಕ ಟಿಕೇಟ್ ತಪ್ಪಸಿದ್ದಾರೆ , ನಾನು ನನ್ನ ಅನುಯಾಯಿಗಳ, ಕಾರ್ಯಕರ್ತರ, ಅಭಿಪ್ರಾಯ ಪಡೆದು ಚುಣಾವಣೆಗೆ ಸ್ಪರ್ಧೆ ಮಾಡುತ್ತಿದ್ದೆನೆ ಗೆಲವು ನನ್ನದೆ ಎಂದರುಈ ಸಂದರ್ಭದಲ್ಲಿ ಯಮಕನಮರ್ಡಿ ಕ್ಷೇತ್ರದ ಅಷ್ಟಗಿ ಅಭಿಮಾನಿ ಗಳು ಉಪಸ್ಥಿತರಿದ್ದರು.

## ಶಿಗ್ಗಾವಿ–ಸವಣೂರು ವಿಧಾನಸಭಾ ಕ್ಷೇತ್ರದಿಂದ ಬಸವರಾಜ ಬೊಮ್ಮಾಯಿ ನಾಮಪತ್ರ ಸಲ್ಲಿಕೆ



ಹಾವೇರಿ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಬುಧವಾರ ಶಿಗ್ಗಾವಿ–ಸವಣೂರು ವಿಧಾನಸಭಾ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆಗೂ ಮೊದಲು ಶಿಗ್ಗಾವಿಯಲ್ಲಿ ಬೃಹತ್ ರೋಡ್ ಶೋ ನಡೆಸಿದರು. ಈ ಸಂದರ್ಭದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ,ಚಿತ್ರನಟ ಸುದೀಪ್ ಮತ್ತಿತರರು ಹಾಜರಿದ್ದರು.

## ಬಿಜೆಪಿ ಅಭ್ಯರ್ಥಿ ವಿಠ್ಠಲ ಹಲಗೇಕರ ನಾಮಪತ್ರ ಸಲ್ಲಿಕೆ



ಖಾನಾಪೂರ: ಚೌಕಾಶಿ ದೇವಿ ಮಂದಿರದಿಂದ ಪೂಜೆ ಸಲ್ಲಿಸಿ ಬೃಹತ್ ಮೆರವಣಿಗೆ ಮೂಲಕ ವಿವಿಧ ಮಂದಿರಗಳಿಗೆ ತೆರಳಿ ದರ್ಶನ್ ಪಡೆದುಕೊಂಡು ಮಹಾಪುರುಷ ಪುತ್ಥಳಿ ಗಳಿಗೆ ಮಾಲಾರ್ಪಣೆ ಮಾಡಿ ತಮ್ಮ ಕಾರ್ಯಕರ್ತರೊಂದಿಗೆ ಎತ್ತಿನ ಗಾಡಿಯಲ್ಲಿ ತಹಶೀಲ್ದಾರ್ ಕಚೇರಿಗೆ ತೆರಳಿ ತಮ್ಮ ನಾಮಪತ್ರ ಸಲ್ಲಿಕೆಯನ್ನು ಬಿಜೆಪಿ ಅಭ್ಯರ್ಥಿ ವಿಠ್ಠಲ ಹಲಗೇಕರ ಅವರು ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು ಕಾರ್ಯಕರ್ತರು ಬಹು ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

## ಕಾಗವಾಡ ಕ್ಷೇತ್ರ ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲರು ನಾಮಪತ್ರ ಸಲ್ಲಿಕೆ

ಕಾಗವಾಡ: ಕ್ಷೇತ್ರ ಶಾಸಕ ಹಾಗೂ ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲರು ಮಾಜಿ ಸಚಿವ ರಮೇಶ ಜಾರಕಿಹೊಳಿ, ರಮೇಶ ಕತ್ತಿ, ಸಂಸದ ಅಣ್ಣಾಸಾಹೇಬ ಜೊಲ್ಲೆ, ಮಹೇಶ ಕುಮಟಳ್ಳಿ ಸೇರಿದಂತೆ ಅನೇಕ ಘಟಾನುಘಟಿಗಳ ಮುಖ್ಯ ಉಪಸ್ಥಿತಿಯಲ್ಲಿ ಸುಮಾರು 25 ಸಾವಿರ ಮತದಾರರ ಭವ್ಯ ರ್ಯಾಲಿ ಮುಖಾಂತರ ನಾಮಪತ್ರ ಸಲ್ಲಿಕೆ ಮಾಡಿ ಶಕ್ತಿ ಪ್ರದರ್ಶನ ಮಾಡಿದರು.

ಬುಧವಾರ ರಂದು ಕಾಗವಾಡ ಕ್ಷೇತ್ರದ ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲರು ಮಂಗಸೂಳಿ ಗ್ರಾಮದಿಂದ ಪಕ್ಷದ ಸಾವಿರಾರು ಕಾರ್ಯಕರ್ತರ ಸಮ್ಮುಖದಲ್ಲಿ ಮೆರವಣಿಗೆ ಮುಖಾಂತರ ಕಾಗವಾಡಕ್ಕೆ ಆಗಮಿಸಿ ಸ್ಥಳೀಯ ಶಿವಾನಂದ ಮಹಾ ವಿದ್ಯಾಲಯದಲ್ಲಿ ಪ್ರಾರಂಭಿಸಿದ್ದ ಚುನಾವಣಾ ಕಾರ್ಯಾ ಲಯದಲ್ಲಿ ಚುನಾವಣಾಧಿಕಾರಿ ಎಚ್. ಹರೀಷ ಇವರಿಗೆ ನಾಮಪತ್ರ ಸಲ್ಲಿಸಿದರು.

ಮಾಜಿ ಸಂಸದರು ಹಾಗೂ ಚಿಕ್ಕೋಡಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಪಕ್ಷದ ಅಭ್ಯರ್ಥಿ ರಮೇಶ ಕತ್ತಿ ಮಾತನಾಡುವಾಗ, ದೇಶ ಕಂಡ ಅಪರೂಪದ ಪ್ರಧಾನಿ ನರೇಂದ್ರ ಮೋದಿಜಿ ಇವರ ನೇತೃತ್ವದಲ್ಲಿ ಮತ್ತೊಮ್ಮೆ ಕರ್ನಾಟಕದಲ್ಲಿ ಬಿಜೆಪಿ ಆಡಳಿತ ಬರುತ್ತದೆ. ಅದರೊಂದಿಗೆ ಬೆಳಗಾವಿ ಜಿಲ್ಲೆಯಲ್ಲಿ 18 ಕ್ಷೇತ್ರದ ಪೈಕಿ ಕಾಗವಾಡ ಸೇರಿದಂತೆ 15 ಕ್ಷೇತ್ರದಲ್ಲಿ ಕಮಳ ಅರಳಲಿದೆ. ಶ್ರೀಮಂತ ಪಾಟೀಲರು ಒಳ್ಳೆಯ ಶಾಸಕರು. ಅವರಿಗೆ ಜನ ಬೆಂಬಲವಿದೆ. ಕತ್ತಿ ಮನೆತನದಲ್ಲಿ ಎರಡು ಟಿಕೆಟ್ಗಳು ನೀಡಿದ್ದಾರೆ. ನಮ್ಮ ಸೇವೆ ಗಮನಿಸಿ ಪಕ್ಷ ನೀಡಿದ



ಜವಾಬ್ದಾರಿ ಒಳ್ಳೆ ರೀತಿಯಿಂದ ಪಾಲಿಸುತ್ತೇವೆಯೆಂದರು. ಬಿಜೆಪಿ ಪಕ್ಷದ ಅಭ್ಯರ್ಥಿಗಳು ಹಾಗೂ ಶಾಸಕ ಶ್ರೀಮಂತ ಪಾಟೀಲ ಮಾತನಾಡಿ, ಕಾಗವಾಡ ಕೇತ್ರದ ಜನತೆ ನಾನು ಕಳೇದ ಐದು ವರ್ಷಗಳಿಂದ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿ ನಾವು ನಿಮ್ಮ ಪರಯಿದ್ದೇವೆಯೆಂದು ಸ್ಪಷ್ಟವಾಗಿ ತಿಳಿಸುತ್ತಿದ್ದಾರೆ. ಇಲ್ಲಿಯ ಮತದಾರರು ಮತ್ತು ನಾನು ಒಂದೇ ಕುಟುಂಬದವರಿಂದ್ದಂತೆ ಇದ್ದೇವೆ. ಈ ಚುನಾವಣೆಯಲ್ಲಿ ಸುಮಾರು 50 ಸಾವಿರಕ್ಕಿಂತ ಅಧಿಕ ಮತಗಳಿಂದ ನನ್ನ ಯಶ ಖಚಿತವಿದೆಯೆಂದು ಹೇಳಿ ಪ್ರಚಾರಕ್ಕಾಗಿ ದೇಶದ ಪ್ರಧಾನಿ ನರೇಂದ್ರ ಮೋದಿಜಿ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಇಂಥ'ಹ ವರಿಷ್ಠರು ಬರಲಿದ್ದಾರೆಯೆಂದು ಹೇಳಿದರು. ಅಭ್ಯರ್ಥಿ ಶ್ರೀಮಂತ ಪಾಟೀಲರ ನಾಮಪತ್ರ ಸಲ್ಲಿಸಲು ಆಗಮಿಸಿದ್ದ ಮಾಜಿ ಸಚಿವ ರಮೇಶ ಜಾರಕಿಹೊಳಿಯವರಿಗೆ ಮಾಧ್ಯಮದವರು ಚುನಾವಣೆ ಬಗ್ಗೆ ವಿಚಾರಿಸಿದಾಗ ಯಾವುದೇ ಪ್ರತಿಕ್ರಿಯೆ ನೀಡದೆ ಎಲ್ಲ ಸರಿಯಾಗಿದೆ, ನಾನು ಬರುವ 13 ತಾರಿಕ್ಕಿನವರೆಗೆ ಯಾವುದೇ ಹೇಳಿಕೆ ನೀಡುವುದಿಲ್ಲವೆಂದು ಸ್ಪಷ್ಟವಾಗಿ ಹೇಳಿ ಪ್ರತಿಕ್ರಿಯೆ ನೀಡಲು ನಿರಾಕರಿಸಿದರು.

ಚಿಕ್ಕೋಡಿ ಸಂಸದ ಅಣ್ಣಾಸಾಹೇಬ ಜೊಲ್ಲೆ, ಅಥಣಿ ಶಾಸಕ ಮಹೇಶ ಕುಮಟಳ್ಳಿ ಇವರು ಶಾಸಕ ಶ್ರೀಮಂತ ಪಾಟೀಲರಿಗೆ ಸಾಥ'ನೀಡಿ, ತೆರೆದ ವಾಹನದಲ್ಲಿ ಎಲ್ಲ ನಾಯಕರು ಕಾಗವಾಡ ಗ್ರಾಮ ಪಂಚಾಯಿತಿ ಮುಂಭಾಗದಿಂದ ರಾಣಿ ಚೆನ್ನಮ್ಮ ವೃತ್ತದವರೆಗೆ ಸಾವಿರಾರು ಮತದಾರರು ಬಿಜೆಪಿ ಪಕ್ಷ ಹಾಗೂ ಶ್ರೀಮಂತ ಪಾಟೀಲರ ವಿಜಯದ ಸಂಕೇತ ವ್ಯಕ್ತಪಡಿಸಿ ಉರಿಬಿಸಿಲಿನಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ವಿದ್ಯಾಸಾಗರ ಶಿಕ್ಷಣ ಸಂಸ್ಥೆಯ ಸಭಾಭವನದಲ್ಲಿ ಬಹಿರಂಗ ಸಭೆ ಹಮ್ಮಿಕೊಂಡು ಕೇಂದ್ರ ಹಾಗೂ ರಾಜ್ಯ ಸರಕಾರದ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಗಣ್ಯರು ಕಾರ್ಯಕರ್ತರಿಗೆ ಮಾಹಿತಿ ನೀಡಿ ಮನೆ–ಮನೆಗೆ ತರಳಿ ಮತದಾರರಿಗೆ ಮಾಹಿತಿ ನೀಡುವಂತೆ ಕರೆ ನೀಡಿದರು.

ಶಾಸಕ ಶ್ರೀಮಂತ ಪಾಟೀಲರ ಸುಪುತ್ರರಾದ ಶ್ರೀನಿವಾಸ, ಸುಶಾಂತ, ಯೊಗೇಶ ಮೂರು ಯುವ ನೇತಾರರನ್ನು ಕಾರ್ಯಕರ್ತರು ಹೆಗಲು ಮೇಲೆ ತೆಗೆದುಕೊಂಡು ಮೆರವಣಿಗೆಯಲ್ಲಿ ಕುಣಿದು ಕುಪ್ಪಳಿಸಿದರು.ಅಥಣಿ ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಶೀತಲಗೌಡ ಪಾಟೀಲ, ಶಿರಗುಪ್ಪಿ ಕೆ.ಎಲ್.ಇ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶಿವಾನಂದ ಪಾಟೀಲ, ಶಿರಗುಪ್ಪಿ ಪಿಕೆಪಿಎಸ್ ಮಾಜಿ ಅಧ್ಯಕ್ಷ ನ್ಯಾಯವಾದಿ ಅಭಯಕುಮಾರ ಅಕಿವಾಟೆ, ಐನಾಪುರ ಕೆ.ಆರ್.ಇ.ಎಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ದಾದಾಗೌಡ ಪಾಟೀಲ, ಸೇರಿದಂತೆ ಅನೇಕ ಕಾರ್ಯಕರ್ತರು ಪಾಲ್ಗೊಂಡು ಶಕ್ತಿ ಪ್ರದರ್ಶನೆ ಮಾಡಿದರು.

## ಪಕ್ಷೇತರ ಅಭ್ಯರ್ಥಿಯಾಗಿ ಪ್ರೀಯಾಂಕ ಜಾರಕಿಹೋಳಿ ನಾಮಪತ್ರ ಸಲ್ಲಿಕೆ




ಯಮಕನಮರಡಿ: ಶಾಸಕ ಸತೀಶ ಜಾರಕಿಹೋಳಿ ಯವರ ಪುತ್ರಿ ಪ್ರೀತಾಂಕಾ ಬುಧವಾರ ಹುಕ್ಕೇರಿ ನಗರದ ಯಮಕನಮರ್ಡಿ ಚುನಾವಣೆ ಅಧಿಕಾರಿ ಬಲರಾಮ್ ಚವ್ಹಾನ ಮತ್ತು ವಿಲಾಸರಾಜ್ ಅವರಿಗೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಯಮಕನಮರ್ಡಿ ಕ್ಷೇತ್ರದ ಜಾರಕಿಹೋಳಿ ಅಭಿಮಾನಿಗಳಾದ ಕೀರಣ ರಜಪೂತ ,ಮಹೇಶ ಚಿಕ್ಕೋಡಿ, ಆನಂದ ಪಾಟೀಲ ಮೊದಲಾದವರು ಉಪಸ್ಥಿತರಿದ್ದರು.

# ಮೂರುಸಾವಿರ ಮಠಕ್ಕೆ ಜೆ.ಪಿ.ನಡ್ಡಾ ಅವರ ಭೇಟಿ



ಹುಬ್ಬಳ್ಳಿ: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಹುಬ್ಬಳ್ಳಿಯಲ್ಲಿಂದು ಮೂರುಸಾವಿರ ಮಠಕ್ಕೆ ಭೇಟಿ ನೀಡಿ, ಮಠದ ಸ್ವಾಮೀಜಿಗಳಾದ ಶ್ರೀ ಗುರು ಸಿದ್ಧೇಶ್ವರ ಮಹಾಸ್ವಾಮಿಗಳ ಆಶೀರ್ವಚನ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಗುರುಸಿದ್ಧೇಶ್ವರ ಮಹಾಸ್ವಾಮಿಗಳು, ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಗೌರವವನ್ನು ಹೆಚ್ಚಿಸುವತ್ತ ಪ್ರಧಾನಮಂತ್ರಿ ನರೇಂದ್ರಮೋದಿ, ಅಮಿತ್ ಶಾ, ಜೆ.ಪಿ.ನಡ್ಡಾ ಶ್ರಮಿಸುತ್ತಿದ್ದಾರೆ. ಇವರೆಲ್ಲರಿಗೂ ಅಭಿನಂದನೆಗಳು. ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ರಾಜ್ಯ ಸರ್ಕಾರ ಎಲ್ಲ ರೀತಿಯಲ್ಲಿ ಶ್ರಮಿಸುತ್ತಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಅವರು ಕರ್ನಾಟಕಕ್ಕೆ ಅನೇಕ ಯೋಜನೆಗಳನ್ನು ತಂದಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಅವರು ರಾಜ್ಯವನ್ನು ಮುನ್ನಡೆಸುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಇಂದು ಉತ್ತಮ ನಾಯಕತ್ವದಲ್ಲಿ ನಮ್ಮ ಹಿಂದೂ ಧರ್ಮ, ಸಂಸ್ಕೃತಿಯನ್ನು ಶತಮಾನಗಳಷ್ಟು ಮುಂದೆ ಕೊಂಡೊಯ್ಯುವ ಕೆಲಸ ನಡೆಯಬೇಕಿದೆ. ಹಿಂದೂ ಪರಂಪರೆಯೊಂದಿಗೆ ರಾಷ್ಟ್ರ ಪ್ರಗತಿ ಕಾರ್ಯಕ್ಕೆ ಮಠದ ವತಿಯಿಂದ ಶುಭ ಕಾಮನೆಗಳು ಎಂದು ಶ್ರೀ ಗುರುಸಿದ್ಧೇಶ್ವರ ಮಹಾಸ್ವಾಮಿಗಳು ನುಡಿದರು.

ಈ ಸಂದರ್ಭದಲ್ಲಿ ಶಾಸಕ ಅರವಿಂದ ಬೆಲ್ಲದ, ರಾಜ್ಯ ಶಿಸ್ತು ಸಮಿತಿ ಅಧ್ಯಕ್ಷ ಲಿಂಗರಾಜ ಪಾಟೀಲ್ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

# ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷರಾಗಿ ಎಂ.ಎಸ್.ಲೋಣಿ ನೇಮಕ



ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷರನ್ನಾಗಿ ಎಂ.ಎಸ್.ಲೋಣಿ ಅವರನ್ನು ನೇಮಕ ಮಾಡಲಾಗಿದೆ. ಈ ನೇಮಕಾತಿ ಆದೇಶ ಪ್ರತಿಯನ್ನು ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂ.ಬಿ.ಪಾಟೀಲ ಅವರು ಎಂ.ಎಸ್.ಲೋಣಿ ಅವ–ರಿಗೆ ನೀಡಿದರು. ನಂತರ ಮಾತನಾಡಿದ ಎಂ.ಬಿ.ಪಾಟೀಲ ಅವರು, ಲಕ್ಷ್ಮಣ ಸವದಿ, ಜಗದೀಶ ಶೆಟ್ಟರ ಸೇರ್ಪಡೆಯಿಂದ ಪಕ್ಷಕ್ಕೆ ಬಲ ಬಂದಿದೆ. ಕಾಂಗ್ರೆಸ್ ಪಕ್ಷದ ಕೊಡುಗೆಗಳು, ಗ್ಯಾರಂಟಿ ಸ್ಕೀಂ ಗಳು ಮತ್ತು ಬಿಜೆಪಿಯ ವೈಫಲ್ಯಗಳ ಕು–ರಿತು ಮತದಾರರಲ್ಲಿ ಜಾಗೃತಿ ಮೂಡಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಂ.ಎಸ್.ಲೋಣಿ ನನ್ನನ್ನು ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿ ಎಂ.ಬಿ.ಪಾಟೀಲರು ಆದ–ೇಶ ಪ್ರತಿ ನೀಡಿರುವುದು ಅತೀವ ಸಂತೋಷ ಉಂಟು ಮಾಡಿದೆ. ಈ ಚುನಾವಣೆಯಲ್ಲಿ ಕಾಂಗ್ರೆಸ್ ಸಂಘಟನೆಗಾಗಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಎಲ್ಲ ಕ್ಷೇತ್ರಗಳಲ್ಲಿ ಪ್ರವಾಸ ಕೈಗೊಂಡು ನನ್ನ ಬೆಂಬಲಿಗರನ್ನು ಪಕ್ಷಕ್ಕೆ ಕರೆ ತರುತ್ತೇನೆ.

ಅಲ್ಲದೇ, ಎರಡೂ ಜಿಲ್ಲೆಗಳ ಎಲ್ಲ ಕ್ಷೇತ್ರಗಳ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸುತ್ತೇನೆ ಎಂದು ಹೇಳಿದರು.

ಈ ಮುಂಚೆ ಸಿದ್ದರಾಮಯ್ಯ ನೇತೃತ್ವ ಸರಕಾರ ಅನೇಕ ಜನಪರ ಕಾರ್ಯಗಳನ್ನು ಮಾಡಿದೆ.

ಆದರೆ, ಇಂದಿನ ಬಿಜೆಪಿ ಸರಕಾರ ಭ್ರಷ್ಟಚಾರದಲ್ಲಿ ಮುಳಿಗಿದೆ. ಆ ಪಕ್ಷದ ಮುಖಂಡರ ಬಿನ್ನಾಭಿಪ್ರಾಯ ದಿಂದಾಗಿ ವರ್ಚಸ್ಸು ಕಳೆದುಕೊಂಡಿದೆ. ಈ ಬಾರಿ ಮತ್ತೆ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎಸ್. ಎಸ್.ಲೋಣಿ, ಗೊಲ್ಲಾಳಪ್ಪಗೌಡ ಪಾಟೀಲ, ರಾಕೇಶ ಕಲ್ಲೂರ, ಶರಣು ಯಕ್ಕುಂಡಿ, ನಿಂಗಪ್ಪ ಕೊಂಡಗೂಳಿ, ಸಂತೋಷ ಶ್ಯಾಪೇಟಿ, ವಿಠ್ಠಲ ಕತ್ನಳ್ಳಿ, ನಿಂಗನಗೌಡ ಪಾಟೀಲ, ನರಸಿಂಗಸಾ ತಿವಾರಿ ಮುಂತಾದವರು ಉಪಸ್ಥಿತ–ರಿದ್ದರು.

# ಸಿದ್ಧಗಂಗಾ ಮಠಕ್ಕೆ ನೂತನ ಉತ್ತರಾಧಿಕಾರಿ ನೇಮಕ



ತುಮಕೂರು: ಸಿದ್ಧಗಂಗಾ ಮಠದ ಉತ್ತರಾಧಿಕಾರಿ ಯಾರಾಗಲಿದ್ದಾರೆ ಎಂಬ ಬಹು ದಿನಗಳ ಕುತೂಹಲಕ್ಕೆ ತೆರೆ ಬಿದ್ದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಮನೋಜ್ ಕುಮಾರ್ ಎಂಬುವವರನ್ನು ಸಿದ್ಧಗಂಗಾ ಮಠದ ನೂತನ ಉತ್ತರಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.

ನೆಲಮಂಗಲ ತಾಲ್ಲೂಕು ಮೈಲನಹಳ್ಳಿಯ ಮನೋಜ್ ಕುಮಾರ್ ಅವರು ಷಡಕ್ಷರಿ ಎಂ.ಬಿ ಹಾಗೂ ವಿರೂಪಾಕ್ಷಮ್ಮ ದಂಪತಿಗಳ ಪುತ್ರರಾಗಿದ್ದು, 1987 ಜೂನ್ 2ರಂದು ಜನಿಸಿದ್ದಾರೆ. ಇವರು ಬಿ.ಎಸ್ಸಿ, ಬಿ.ಎಡ್, ಎಂ.ಎಸ್ಸಿ, ಎಂ.ಎ ವಿದ್ವತ್ ಶಿಕ್ಷಣ ಪಡೆದುಕೊಂಡಿದ್ದು, ಶ್ರೀ ಸಿದ್ಧಗಂಗಾ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಉಪ ನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಸಿದ್ಧಗಂಗಾ ಮಠದ ಜೊತೆಗೆ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಕಂಚುಗಲ್ ಬಂಡೇಮಠಕ್ಕೆ ಹರ್ಷ ಕೆ.ಎಂ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು ಬಸವ ಕಲ್ಯಾಣ ಮಠಕ್ಕೆ ಗೌರೀಶ್ ಕುಮಾರ್ ಅವರನ್ನು ಉತ್ತರಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ನೂತನ ಮೂವರು ಉತ್ತರಾಧಿಕಾರಿಗಳನ್ನು ಇದೇ ಏಪ್ರಿಲ್ 23ರ ಅಕ್ಷಯ ತೃತೀಯ ಹಾಗೂ ಬಸವ ಜಯಂತಿಯಂದು ನಿರಂಜನ ಪಟ್ಟಾಧಿಕಾರ ಹಾಗೂ ಉತ್ತರಾಧಿಕಾರಿಗಳನ್ನಾಗಿ ನೇಮಕ ಮಾಡುವ ಕಾರ್ಯಕ್ರಮವನ್ನು ಸಿದ್ಧಗಂಗಾ ಮಠದಲ್ಲಿ ಆಯೋಜಿಸಲಾಗಿದೆ.

# 1 ಕೋಟಿ 65 ಲಕ್ಷ ರೂ. ಮೌಲ್ಯದ ಗಾಂಜಾ ಜಪ್ತಿ ಮಾಡಿದ ಪೊಲೀಸರು



ಬೀದರ್: ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ 1 ಕೋಟಿ 65 ಲಕ್ಷ ಮೌಲ್ಯದ 165 ಕೆಜಿ ಗಾಂಜಾವನ್ನು ಪೊಲೀಸರು ಜಪ್ತಿ ಮಾಡಿರುವ ಘಟನೆ ಬೀದರ್‌ನಲ್ಲಿ ನಡೆದಿದೆ.

ಆಂಧ್ರಪ್ರದೇಶದ ವಿಜಯವಾಡದಲ್ಲಿ ಗಾಂಜಾದ ಮೂಲ ಕಿಂಗ್‌ಪಿನ್ ಓರ್ವನನ್ನು ಬಂಧಿಸಲಾಗಿತ್ತು. ಆತ ನೀಡಿದ ಖಚಿತ ಮಾಹಿತಿಯ ಮೇರೆಗೆ ಹೈದರಾಬಾದ್‌ನಿಂದ ಮಹಾರಾಷ್ಟ್ರಕ್ಕೆ ಕಾರಿನಲ್ಲಿ ಸಾಗಿಸುತ್ತಿದ್ದ 156 ಕೆಜಿ ಗಾಂಜಾವನ್ನು ಬೀದರ್ ಪೊಲೀಸರು ಜಪ್ತಿ ಮಾಡಿದ್ದಾರೆ. ಜಿಲ್ಲೆಯ ಚಿಟ್ಟಗುಪ್ಪ ತಾಲೂಕಿನ ಬೆಳಕೇರಾ ಗ್ರಾಮದ ಬಳಿ 1 ಕೋಟಿ 56 ಲಕ್ಷ ಮೌಲ್ಯದ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ.

ಅದೇ ರೀತಿ ಬೀದರ್ ನಗರದ ರೈಲ್ವೇ ಟ್ರ್ಯಾಕ್‌ಬಳಿ ಪ್ರತ್ಯೇಕ ಎರಡು ಪ್ರಕರಣಗಳಲ್ಲಿ ತಲಾ 5 ಕೆಜಿಯಂತೆ ಒಟ್ಟು 10 ಕೆಜಿ ಗಾಂಜಾವನ್ನು ಜಪ್ತಿ ಮಾಡಿದ್ದಾರೆ. ಒಟ್ಟು ಮೂರು ಪ್ರಕರಣದಲ್ಲಿ 165 ಕೆಜಿ ಗಾಂಜಾ ಜಪ್ತಿ ಮಾಡಿದ ಬೀದರ್ ಪೊಲೀಸರು ಆರು ಜನ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಎಸ್ಪಿ ಚನ್ನಬಸವಣ್ಣ ಲಂಗೋಟಿಯವರ ಮಾರ್ಗದರ್ಶನದಲ್ಲಿ ಭರ್ಜರಿ ಕಾರ್ಯಾಚರಣೆ ಮಾಡಿದ್ದು, ಕಾರ್ಯಾಚರಣೆ ಮಾಡಿದ ಪೊಲೀಸರಿಗೆ ಎಸ್ಪಿ ಪ್ರಶಂಸಾ ಪತ್ರ ಹಾಗೂ 1 ಲಕ್ಷ ಬಹುಮಾನ ನೀಡಿ ಗೌರವಿಸಿದ್ದಾರೆ.

# ಸವದತ್ತಿಯಲ್ಲಿ ಮತದಾರರಿಗೆ ಹಂಚಲು ಸಂಗ್ರಹಿಸಿದ್ದ 42.92 ಲಕ್ಷ ಮೌಲ್ಯದ ಹೊಲಿಗೆ ಯಂತ್ರ, ಟಿಫಿನ್ ಬಾಕ್ಸ್ ವಶ



ಬೆಳಗಾವಿ: ಸವದತ್ತಿ ಜೆಡಿಎಸ್ ಅಭ್ಯರ್ಥಿ ಸೌರಬ್ ಚೋಪ್ರಾ ಅವರಿಗೆ ಸೇರಿರುವ 42.92 ಲಕ್ಷ ಮೌಲ್ಯದ ಹೋಲಿಗೆ ಯಂತ್ರ ಮತ್ತು ಟಿಫಿನ್ ಬಾಕ್ಸ್ ವಶಪಡಿಸಿಕೊಳ್ಳಲಾಗಿದೆ.

ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಅಧಿಕಾ–ರಿಗಳು ಗೋದಾಮಿನಲ್ಲಿದ್ದ ಈ ವಸ್ತುಗಳನ್ನು ವಶಕ್ಕೆ ಪಡೆದುಕೊಂಡು ಅಭ್ಯರ್ಥಿ ವಿರುದ್ಧ ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

ಚುನಾವಣಾ ಅಧಿಕಾ–ರಿಗಳು 42.92 ಲಕ್ಷ ರೂ . ಮೌಲ್ಯದ ಹೊಲಿಗೆ ಯಂತ್ರ , ಟಿಫಿನ್ ಬಾಕ್ಸ್ ಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ.

ಸವದತ್ತಿ ಉಪವಿಭಾಗಾಧಿಕಾರಿ ನೇತೃತ್ವದಲ್ಲಿ ಸವದತ್ತಿಯ ಗೋದಾಮಿನ ಮೇಲೆ ದಾಳಿ ಮಾಡಿದ್ದು 23 ಲಕ್ಷ 84 ಸಾವಿರದ 272 ರೂ . ಮೌಲ್ಯದ 1012 ಹೊಲಿಗೆ ಯಂತ್ರ , 4.56 ಲಕ್ಷ ಮೌಲ್ಯದ ಹೊಲಿಗೆ ಯಂತ್ರಗಳ 1200 ಟೇಬಲ್‌ಗಳು , 11 ಲಕ್ಷ 27 ಸಾವಿರ 840 ರೂ . ಮೌಲ್ಯದ 1060 ಐರನ್ ಸ್ಟ್ಯಾಂಡ್ , 3.24 ಲಕ್ಷ ಮೌಲ್ಯದ 2160 ಟಿಫಿನ್ ಬಾಕ್ಸ್ ಗಳು ಪತ್ತೆಯಾಗಿವೆ . ಜೆಡಿಎಸ್ ಅಭ್ಯರ್ಥಿ ಸೌರಭ್ ಚೋಪ್ರಾ ಭಾವಚಿತ್ರದ ಟಿಫಿನ್ ಬಾಕ್ಸ್ ಗಳು ಇದ್ದವು . ಸವದತ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜಕಾರಣಿಗಳ ಆಸ್ತಿಪಾಸ್ತಿ ಬೆಳೆಯುವ ಮೂಲ ಯಾವುದು ಗೊತ್ತೇ?

**ವರದಿ: ಎಚ್. ಮಾರುತಿ**

ಪ್ರತಿ ಐದು ವರ್ಷಕ್ಕೊಮ್ಮೆ ಚುನಾವಣೆ ಬರುತ್ತದೆ. ಯಾರೋ ಗೆಲ್ಲುತ್ತಾರೆ, ಮತ್ತ್ಯಾರೋ ಸೋಲುತ್ತಾರೆ. ವಿಷಯ ಅದಲ್ಲ, ಹೀಗೆ ವಿಧಾನಸಭೆ ಮತ್ತು ಲೋಕಸಭೆಗೆ ಸ್ಪರ್ಧೆ ಮಾಡುವ ಅಭ್ಯರ್ಥಿಗಳ ಆಸ್ತಿ ಮಾತ್ರ ರಾಕೆಟ್ ವೇಗದಲ್ಲಿ ಬೆಳೆದಿರುತ್ತದೆ. ಆರು ವರ್ಷಕ್ಕೊಮ್ಮೆ ನಡೆಯುವ ರಾಜ್ಯಸಭೆ ಮತ್ತು ವಿಧಾನಪರಿಷತ್ ಚುನಾವಣೆಗೆ ಸ್ಪರ್ಧಿಸುವವರ ಆಸ್ತಿಯೂ ಇದೇ ರೀತಿ ವೃದ್ಧಿಯಾಗುತ್ತದೆ. ಅವರ ಬಳಿ ಮಂತ್ರ ದಂಡ ಇರುತ್ತದೆಯೇರೂ ಲಕ್ಷ್ಮಿ ಅವರ ಮನೆಯಲ್ಲಿ ಕಾಲು ಮುರಿದುಕೊಂಡು ನೆಲೆಸಿರುತ್ತಾಳೆಯೆ. ಇಲ್ಲ ಎನ್ನುವುದಾದರೆ ಉಳಿಯುವ ಒಂದೇ ಪ್ರಶ್ನೆ ಎಂ ಎಲ್ ಎ ಅಥವಾ ಎಂಪಿ ಆದರೆ ಇಷ್ಟೊಂದು ಸಂಪಾದನೆ ಮಾಡಬಹುದು ಎಂಬ ತೀರ್ಮಾನ ಮಾಡಿಬಿಡಬಹುದು.

ಈ ರೀತಿ ಆಸ್ತಿ ಸಂಪಾದನೆಗೆ ಪಕ್ಷ ಭೇದ ಇರುವುದಿಲ್ಲ. ದೇಶದ ಉದ್ದಗಲಕ್ಕೂ ಇರುವ ಎಲ್ಲ ಪಕ್ಷಗಳ ಹಣೆ ಬರಹ ಇಷ್ಟೇ. ರಾಜ್ಯದ ಮಟ್ಟಿಗೆ ಹೇಳುವುದಾದರೆ ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳ ಅಭ್ಯರ್ಥಿಗಳ ಆಸ್ತಿ ಐದು ವರ್ಷಗಳಲ್ಲಿ ದುಪ್ಪಟ್ಟು, ಮೂರೂ, ಐದಾರು ಪಟ್ಟು ವೃದ್ಧಿ ಆಗಿರುತ್ತದೆ. ಅಂದರೆ ರಾಜಕಾರಣದಲ್ಲಿ ಸಂಪಾದನೆ ಇದೆ ಎಂದು ನಿಸ್ಸಂದೇಹವಾಗಿ ಹೇಳಬಹುದು.

ಮಲೆನಾಡು ಗಾಂಧಿ ಎಂದೇ ಹೆಸರಾದ ಮಾಜಿ ಶಿಕ್ಷಣ ಸಚಿವ ಎಚ್.ಜಿ.ಗೋವಿಂದೇಗೌಡ ಒಮ್ಮೆ ಹೇಳಿದ್ದ ಮಾತು ನೆನಪಿಗೆ ಬರುತ್ತದೆ.

" ಚುನಾವಣೆಯಿಂದ ರಾಜಕೀಯ ಕ್ಷೇತ್ರ ಇಷ್ಟು ಬೇಗ ಇಷ್ಟು ದೊಡ್ಡ ಪ್ರಮಾಣದಲ್ಲಿ ಹೊಲಸೆದ್ದು ಹೋಗುತ್ತದೆ ಎಂದು ಭಾವಿಸಿರಲಿಲ್ಲ. ಇಂದಿನ ರಾಜಕಾರಣಿಗಳು ಅಧಿಕಾರ ಇರುವುದು ಜನರ ಸೇವೆಗೆ ಎಂಬುದನ್ನು ಮರೆತು ದಬ್ಬಾಳಿಕೆ, ದೌರ್ಜನ್ಯ, ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ಅವರ ಮುಂದೆ ದೇಶದ ಬಗ್ಗೆ ದೊಡ್ಡ ಕನಸುಗಳೂ ಇಲ್ಲ, ಪ್ರಾಮಾಣಿಕತೆಯೂ ಇಲ್ಲ. ಭ್ರಷ್ಟಾಚಾರವೇ ರಾಜಕಾರಣ ಎಂಬಂತಾಗಿದೆ" ಎಂದು ನೊಂದು ಹೇಳಿದ್ದರು.

ರಾಜ್ಯ ವಿಧಾನಸಭಾ ಚುನಾವಣೆ ಹೊಸ್ತಿಲಲ್ಲಿ ಇದ್ದೇವೆ. ನಾಮ ಪತ್ರ ಸಲ್ಲಿಸುವ ಕೊನೆಯ ದಿನಾಂಕವೂ ಮುಗಿದು ಹೋಗಿದ್ದು ಅಭ್ಯರ್ಥಿಗಳ ಆಸ್ತಿ ಘೋಷಣೆ ಆಗಿದೆ. ಅವರು ಘೋಷಿಸಿಕೊಂಡ ಆಸ್ತಿಯ ವಿವರಗಳನ್ನು ನೋಡಿದರೆ ಮೂರ್ಛೆ ಹೋಗುವುದು ಬಾಕಿ.

ಅವರ ಸಂಬಳ ಭತ್ಯೆ ವಿವರಗಳನ್ನು ನೋಡುವುದಾದರೆ ಶಾಸಕರು ಕಳೆದ ಮೂರು ವರ್ಷಗಳಿಂದ 1.25 ಲಕ್ಷ ವೇತನವನ್ನು ಪಡೆಯುತ್ತಿದ್ದಾರೆ. ಶಾಸಕರ ಪ್ರಯಾಣ ಭತ್ಯೆ ಪ್ರತಿ ಕಿ. ಮೀಗೆ 25 ರುಪಾಯಿ, ಪೆಟ್ರೋಲ್ ಮಿತಿಯನ್ನು 750ರಿಂದ 1000 ಲೀಟರ್ ಗೆ ಹೆಚ್ಚಿಸಲಾಗಿದೆ. ಇನ್ನು ಶಾಸಕರು ಭಾಗಿಯಾಗುವ ಪ್ರತಿ ಸಭೆಗೆ 1500 ರುಪಾಯಿ ಭತ್ಯೆ ಪಡೆಯುತ್ತಿದ್ದಾರೆ.

ಸಚಿವರ ಮನೆ ಬಾಡಿಗೆ 80 ಸಾವಿರ, ಕ್ಯಾಬಿನೆಟ್ ಸಚಿವರ ವೇತನ 40 ಸಾವಿರ, ರಾಜ್ಯ ಸಚಿವರ ವೇತನ 35 ಸಾವಿರ ನಿಗದಿಯಾಗಿದೆ.

ಸಂಬಳ ಹಾಗೂ ಭತ್ಯೆ ಇಷ್ಟೇ ಆಗಿದ್ದು, ರಾಜಕಾರಣಿಗಳ ಆದಾಯ ಮೂಲ ಇದಲ್ಲ ಎನ್ನುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ.

ಆಯಿತು, ಬೇರೆ ಆದಾಯ ಮೂಲಗಳು ಇವೆ. ಕೈಗಾರಿಕೆ, ವ್ಯಾಪಾರ ವಹಿವಾಟು, ಉದ್ದಿಮೆ, ಕೃಷಿ ತೋಟ ಎಲ್ಲವೂ ಇದೆ ಎಂದು ಭಾವಿಸೋಣ. ಇದೇ ರೀತಿಯ ಉದ್ದಿಮೆಗಳಲ್ಲಿ ತೊಡಗಿಸಿಕೊಂಡಿರುವ ರಾಜಕಾರಣಕ್ಕೆ ಬಾರದೆ ಇರುವವರ ಆಸ್ತಿ ಪಾಸ್ತಿ ಹೀಗೆ ಏರಿಕೆ ಕಂಡಿರುತ್ತದೆ ಎಂದು ಹೇಳಲಾಗದು. ಅದರಲ್ಲೂ ನೋಟು ಅಮಾನ್ಯಿಕರಣ, ಕೋವಿಡ್ ಒಕ್ಕ–ರಿಸಿದ ನಂತರ ವ್ಯಾಪಾರ ವಹಿವಾಟು ಬಂದ್ ಆಗಿ ನೆಲ ಕಚ್ಚಿರುವವರ ಉದಾಹರಣೆಗಳೇ ಹೆಚ್ಚು. ಹೀಗಿದ್ದೂ ಶಾಸಕರ ಆಸ್ತಿ ಮಾತ್ರ ಹೆಚ್ಚಳವಾಗಿದೆ.

ನೆನಪಿಡಿ, ಇದು ಘೋಷಣೆ ಮಾಡಿಕೊಂಡಿರುವ ಆಸ್ತಿ ವಿವರ ಮಾತ್ರ. ಅಘೋಷಿತ ಮತ್ತು ಬೇನಾಮಿ ಮೂಲೆಗಳಲ್ಲಿರುವ ಆಸ್ತಿ ನೂರಾರು ಪಟ್ಟು ಇರುತ್ತದೆ. ಆದ–ರೆ ಬೆಳಕಿಗೆ ಬರುವುದಿಲ್ಲ.

ಒಂದು ವೇಳೆ ಪ್ರಮಾಣ ಪತ್ರದಲ್ಲಿ ಸುಳ್ಳು ಮಾಹಿತಿ ನೀಡಿ, ಕಡಿಮೆ ಆಸ್ತಿಯನ್ನು ಘೋಷಣೆ ಮಾಡಿಕೊಂಡು ಅದು



ಸಾಕ್ಷಿ ಸಮೇತ ಸಾಭೀತಾದರೆ ಅದು ಕಾನೂನಿನ ಪ್ರಕಾರ ಅಪರಾಧ. ಜನತಾ ಪ್ರಾತಿನಿಧ್ಯ ಕಾಯಿದೆ 125(ಅ) ಪ್ರಕಾರ, ಸುಳ್ಳು ಮಾಹಿತಿ ನೀಡಿ ಆಸ್ತಿ ಘೋಷಣೆ ಮಾಡಿಕೊಂಡಿದ್ದರೆ ಅದರ ವಿರುದ್ಧ ನ್ಯಾಯಾಲಯದ ಮೆಟ್ಟಿಲೇರಬಹುದು ಎಂದು ಕಾನೂನು ಪುಸ್ತಕ ಹೇಳುತ್ತದೆ. ಆದರೆ ಇದುವರೆಗೂ ಶಿಕ್ಷೆ ಅನುಭವಿಸಿರುವರ ಸಂಖ್ಯೆ ಬೆರಣಿಕೆಯಷ್ಟು ಮಾತ್ರ.

ಐದು ವರ್ಷಗಳಲ್ಲಿ ದುಪ್ಪಟ್ಟು ಮಾತ್ರವಲ್ಲ, ಬರೋಬ್ಬರಿ 1000ಪಟ್ಟು ಆಸ್ತಿ ಮೌಲ್ಯ ಹೆಚ್ಚಳ ವಾಗಿರುವ ಉದಾಹರಣೆಗಳಿವೆ. 2014ರಿಂದ 2019ರ ಅವಧಿಯಲ್ಲಿ ಸಂಸದರೊಬ್ಬರ ಆಸ್ತಿ ಮೌಲ್ಯ ಶೇಕಡಾ 1032 ಪಟ್ಟು ಹೆಚ್ಚಿದೆ.

ಓರ್ವ ಸಾಮಾನ್ಯ ನಾಗರಿಕನ ಆಸ್ತಿಗಿಂತ ಓರ್ವ ಸಾಮಾನ್ಯ ರಾಜಕಾರಣಿ ಆಸ್ತಿ ಮೌಲ್ಯ ಹೆಚ್ಚು ಎನ್ನುವುದನ್ನು ಮನಗಾಣಬೇಕು.

ಇವತ್ತಿಗೆ ರಾಜಕಾರಣಕ್ಕೆ ಬರುವವರ ಸಂಖ್ಯೆ ಹೆಚ್ಚುತ್ತಿದೆ. ಅಧಿಕಾರದ ಚುಕ್ಕಾಣಿ ಹಿಡಿಯಲು ಎಲ್ಲರೂ ಹಾತೊರೆಯುತ್ತಿದ್ದಾರೆ. ಜನಸೇವೆಗಾಗಿ ಇದ್ದ ಕ್ಷೇತ್ರ ಇವತ್ತು ಹಣ ಮಾಡುವ ಉದ್ಯಮವಾಗಿ ಬೆಳೆದು ನಿಂತಿದೆ. ಹೀಗಾಗಿ ರಾಜಕಾರಣಿಗಳ ಆಸ್ತಿಯು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ.

ಅಲ್ಲದೇ ಜನ ಸೇವೆಗಾಗಿ ಬಳಕೆ ಮಾಡಬೇಕಾದ ಜನಸಾಮಾನ್ಯರ ತೆರಿಗೆ ದುಡ್ಡು ಹೆಚ್ಚಾಗಿ ರಾಜಕಾರಣಿಗಳ ಜೇಬು ತುಂಬಿತ್ತಿದೆ ಎನ್ನುತ್ತಾರೆ ಹಿರಿಯ ರಾಜಕೀಯ ವಿಶ್ಲೇಷಕರೊಬ್ಬರು.

ಪ್ರತಿಯೊಬ್ಬ ಶಾಸಕರಿಗೆ ತಮ್ಮ ಕ್ಷೇತ್ರದ ಅಭಿವೃದ್ಧಿ ರೂಪದಲ್ಲಿ ಐದು ವರ್ಷಗಳಿಗೆ ಅಂದಾಜು 150– 200 ಕೋಟಿ ರೂಪಾಯಿ ಅನುದಾನ ಸಿಗುತ್ತದೆ. ಈ ಮೊತ್ತಕ್ಕೆ ಕಮಿಷನ್ ಸಿಗುತ್ತದೆ. ಮೊದಲೆಲ್ಲಾ ಕಾಮಗಾರಿಗಳನ್ನು ತಮ್ಮ ಹಿಂಬಾಲಕರು ಮತ್ತು ಕಾರ್ಯಕರ್ತರಿಗೆ ಉಡ–ುಗೊರೆಯಾಗಿ ನೀಡುತ್ತಿದ್ದರು. ಈಗ ಬುದ್ದಿ ಕಲಿತಿರುವ ರಾಜಕಾರಣಿಗಳು ಬೇನಾಮಿ ಹೆಸರಿನಲ್ಲಿ ತಾವೇ ಕಾಮಗಾ–ರಿಗಳನ್ನು ನಡೆಸುತ್ತಾರೆ.

ವರ್ಗಾವಣೆ, ಆಯಕಟ್ಟಿನ ಹುದ್ದೆಗಳಿಗೆ ಪೋಸ್ಟಿಂಗ್ ಮೊದಲಾದ ಮಾರ್ಗಗಳೂ ಆದಾಯ ಹೆಚ್ಚಿಸುತ್ತವೆ. ಇಡೀ ದೇಶದಲ್ಲಿ ಭೂಮಿಗೆ ಬಂಗಾರದ ಬೆಲೆ ಬಂದಿದ್ದು ಬಹುತೇಕ ರಾಜಕಾರಣಿಗಳು ರಿಯಲ್ ಎಸ್ಟೇಟ್ ಉದ್ಯಮದಲ್ಲಿ ತೊಡಗಿಸಿ ಕೊಂಡಿದ್ದಾರೆ. ಇಲ್ಲವೇ ರಿಯಲ್ ಎಸ್ಟೇಟ್ ಉದ್ಯಮಿಗಳೇ ರಾಜಕಾರಣಿ ಗಳಾಗುತ್ತಿದ್ದಾರೆ.

ಅಲ್ಲೊಂದು ಇಲ್ಲೊಂದು ಅಪವಾದ ಇರಬಹುದು. ಎರಡು ದಶಕದ ಹಿಂದಿನ ಜನಪ್ರತಿನಿಧಿಗಳಿಗೆ ಈ ಆರೋಪ ಅನ್ವಯಿಸುವುದಿಲ್ಲ.

ಏಕೆಂದರೆ ಅವರಿಗೆ ಶಾಸಕ ಅಥವಾ ಸಂಸದ ಅಂದರೆ ಜನಸೇವಕ ಎಂದು ಮಾತ್ರ ತಿಳಿದಿತ್ತು. ಕಳೆದ 15–20 ವರ್ಷಗಳಿಂದೀಚೆಗೆ ರಾಜಕೀಯ ಪ್ರವೇಶ ಮಾಡುವವರ ಗುಣಮಟ್ಟ ನೋಡಿದರೆ ಅರ್ಥವಾದೀತು.

ನಿಜ! ಹಿಂದೆ ಚುನಾವಣೆಗಳು ದುಬಾರಿ ಆಗಿರಲಿಲ್ಲ. ಕೆಲವೇ ಸಾವಿರ ರೂಪಾಯಿಗಳಲ್ಲಿ ಶಾಸನಸಭೆಗೆ ಪ್ರವೇಶ ಪಡೆದವರನ್ನು ನೋಡಿದ್ದೇವೆ. ಕೊನೆಯವರೆಗೂ ಅವರು ಅದೇ ಪ್ರಾಮಾಣಿಕತೆ ಉಳಿಸಿಕೊಂಡಿದ್ದರು.

ಜನಪ್ರತಿನಿಧಿಗಳು ಭ್ರಷ್ಟರಾಗಲು ಕ್ಷೇತ್ರದ ನಾಗರಿಕರು ಮತ್ತು ಮತದಾರರ ಪಾತ್ರ ಇಲ್ಲದಿಲ್ಲ.

ರಾಜಕಾರಣಿಗಳ ಜತೆ ಮತದಾರರು ಭ್ರಷ್ಟರಾಗಿದ್ದಾರೆ. ನಿಶ್ಚಿತವಾಗಿ ಇಲ್ಲಿಯೂ ಅಪವಾದ ರೀತಿಯಲ್ಲಿ ಮತದಾರರು ಇದ್ದಾರೆ.

ಕೇವಲ ಜನಪ್ರತಿನಿಧಿಗಳ ಆಸ್ತಿ ಮಾತ್ರವಲ್ಲ, ರಾಜ–ಕೀಯದಲ್ಲಿ ತೊಡಗಿಸಿಕೊಂಡಿರುವವರ ಆಸ್ತಿಯೂ ಏರಿಕೆ ಆಗುತ್ತಿದೆ. ರಾಜಕೀಯ ಸೇವಾ ಕ್ಷೇತ್ರ ಅಲ್ಲ, ಉದ್ಯಮವಾಗುತ್ತಿದೆ ಎನ್ನುವುದು ಸುಳ್ಳಲ್ಲ.

**ಕೆಲವು ರಾಜಕಾರಣಿಗಳ ಆಸ್ತಿ ವಿವರ:ನೋಡಿಕೊಳ್ಳಿ**



**ಡಿ.ಕೆ. ಶಿವಕುಮಾರ್**

ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ರಾಮನಗರ ಜಿಲ್ಲೆ ಕನಕಪುರ ವಿಧಾನಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದಾರೆ. ಅವರು ಕುಟುಂಬವು ಒಟ್ಟು ರೂ1,414 ಕೋಟಿ ಮೌಲ್ಯದ ಆಸ್ತಿಯನ್ನು ಹೊಂದಿದೆ. ಕಳೆದ 10 ವರ್ಷಗಳಲ್ಲಿ ಅವರ ಕುಟುಂಬದ ಆಸ್ತಿ ಮೌಲ್ಯ ರೂ1,162 ಕೋಟಿಗಳಷ್ಟು ಏರಿಕೆಯಾಗಿದೆ.


ಡಿಕೆಶಿ ಅವರ ಹೆಸರಿನಲ್ಲಿಯೇ ಒಟ್ಟು ರೂ1,214 ಕೋಟಿ ಮೌಲ್ಯದ ಆಸ್ತಿ ಇದೆ. ಅವರ ಪತ್ನಿ ಉಷಾ ಅವರ ಹೆಸ–ರಿನಲ್ಲಿ ರೂ153.30 ಕೋಟಿ ಮೌಲ್ಯದ ಆಸ್ತಿ ಇದೆ. ಜೊತೆಗೆ, ಅವರ ಮಗ ಆಕಾಶ್ ಹೆಸರಿನಲ್ಲಿ ರೂ66 ಕೋಟಿ ಮೌಲ್ಯದ ಆಸ್ತಿ ಇದೆ ಎಂದು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.

ಡಿಕೆಶಿ ಬಳಿ ರೂ244.93 ಕೋಟಿ ಮತ್ತು ಪತ್ನಿ ಬಳಿ ರೂ20.30 ಕೋಟಿ ಹಾಗೂ ಪುತ್ರನ ಬಳಿ ರೂ12.99 ಕೋಟಿ ಮೌಲ್ಯದ ಚರಾಸ್ತಿ ಇದೆ. ಅಲ್ಲದೆ, ಡಿಕೆಶಿ ಬಳಿ ರೂ970 ಕೋಟಿ, ಪತ್ನಿ ಬಳಿ ರೂ113.38 ಕೋಟಿ ಹಾಗೂ ಪುತ್ರನ ಬಳಿ ರೂ54.33 ಕೋಟಿ ಸ್ಥಿರಾಸ್ತಿ ಇದೆ ಎಂದು ಹೇಳಿದ್ದಾರೆ.

ಕೃಷಿ, ಬಾಡಿಗೆ ಮತ್ತು ವಿವಿಧ ಕಂಪನಿಗಳಲ್ಲಿರುವ ಶೇರುಗಳು ಹಾಗೂ ಉದ್ದಿಮೆಗಳು ತಮ್ಮ ಆದಾಯದ ಮೂಲಗಳು ಎಂದು ಅವರು ಹೇಳಿಕೊಂಡಿದ್ದಾರೆ. ತಮ್ಮ ಹೆಸರಿನಲ್ಲಿ ರೂ226 ಕೋಟಿ ರೂಪಾಯಿ ಮತ್ತು ಪತ್ನಿ ಹೆಸರಿನಲ್ಲಿ ರೂ34 ಕೋಟಿ ಸಾಲವಿದೆ ಎಂದು ತಿಳಿಸಿದ್ದಾರೆ.

ತಮ್ಮ ವಿರುದ್ಧ ಐಟಿ, ಲೋಕಾಯುಕ್ತ, ಜಾರಿ ನಿರ್ದೇಶನಾಯದಲ್ಲಿ ದಾಖಲಾಗಿರುವ ಪ್ರಕರಣಗಳು ಮತ್ತು ಕೊರೊನಾ ನಿಯಮಾವಳಿಗಳ ಉಲ್ಲಂಘನೆ ಸೇರಿದಂತೆ ಒಟ್ಟು 19 ಪ್ರಕರಣಗಳಿವೆ ಎಂದು ವಿವರಿಸಿದ್ದಾರೆ.

**ಎಚ್.ಡಿ.ಕುಮಾರಸ್ವಾಮಿ**



ಜೆಡಿಎಸ್ ವರಿಷ್ಠ ಎಚ್.ಡಿ.ಕುಮಾರಸ್ವಾಮಿ ಚನ್ನಪಟ್ಟಣ ಕ್ಷೇತ್ರದ ಅಭ್ಯರ್ಥಿ. ಅವರು ಒಟ್ಟು ರೂ.46.57ಕೋಟಿ ಮೌಲ್ಯದ ಆಸ್ತಿ ಹೊಂದಿದ್ದಾರೆ. ಇದರಲ್ಲಿ ಚರಾಸ್ತಿ ರು.10.44ಕೋಟಿ, ರೂ.244ಕೋಟಿ ಸ್ಥಿರಾಸ್ತಿ ಹೊಂದಿದ್ದಾರೆ. 17.33 ಕೋಟಿ ರೂಪಾಯಿ ಸಾಲ ಮಾಡಿದ್ದಾರೆ.

ಪತ್ನಿ ಅನಿತಾ ಹೆಸರಿನಲ್ಲಿ 133 ಕೋಟಿ ರೂಪಾಯಿ ಆಸ್ತಿ ಇದೆ. ಪುತ್ರ ನಿಖಿಲ್ ಹೆಸರಿನ 77 ಕೋಟಿ ರೂಪಾಯಿ ಆಸ್ತಿ ಇದೆ. ಕುಮಾರಸ್ವಾಮಿ ಬಳಿ 750 ಗ್ರಾಂ ಚಿನ್ನ, 12.5 ಕೆಜಿ ಬೆಳ್ಳಿ, 4 ಕ್ಯಾರಟ್ ವಜ್ರ, ಟ್ರ್ಯಕ್ಟರ್ ಇದೆ. 48 ಎಕರೆ ಕೃಷಿ ಜಮೀನು ಹಾಗೂ ಪತ್ನಿ ಹೆಸರಿನಲ್ಲಿ 16.05 ಕೋಟಿ ರೂ. ಮೌಲ್ಯದ ಕೃಷಿ ಜಮೀನು ಇದೆ. 5 ಅಪರಾಧ ಪ್ರಕರಣಗಳಿವೆ ಎಂದು ಹೇಳಿದ್ದಾರೆ.

**ಶಶಿಕಲಾ ಜೊಲ್ಲೆ ಆಸ್ತಿ ವಿವರ**



ನಿಪ್ಪಾಣಿ ಶಾಸಕಿ, ಮುಜರಾಯಿ ಸಚಿವೆ ಶಶಿಕಲಾ ಜೊಲ್ಲೆ ಅವರು ರೂ. 11.6 ಕೋಟಿ ಮೌಲ್ಯದ ಚರಾಸ್ತಿಗಳು ಹಾಗೂ ರೂ. 56.98 ಕೊಟಿ ಮೌಲ್ಯದ ಸ್ಥಿರಾಸ್ತಿಗಳು ಸೇರಿ ರೂ.68.58 ಕೋಟಿ ಮೌಲ್ಯದ ಆಸ್ತಿ ಹೊಂದಿದ್ದಾರೆ. ಇವ–ರಿಗೆ ರೂ.1.03 ಕೋಟಿ ವಾರ್ಷಿಕ ಆದಾಯವಿದೆ.

ಇವರ ಹೆಸರಲ್ಲಿ ರೂ.3.9 ಕೋಟಿ ಹಾಗೂ ಪತಿ ಅಣ್ಣಾಸಾಹೇಬ ಜೊಲ್ಲೆ ಹೆಸರಲ್ಲಿ ರೂ.5.73 ಕೋಟಿ, ಪುತ್ರರ ಹೆಸರಲ್ಲಿ ರೂ.1.17 ಕೋಟಿ ಹಾಗೂ ಇತರರ ಹೆಸರಲ್ಲಿ ರೂ.26 ಲಕ್ಷ ಮೌಲ್ಯದ ಚರಾಸ್ತಿಗಳು ಇವೆ.

ಸಚಿವೆ ಹೆಸರಲ್ಲಿ ರೂ.24.13 ಕೋಟಿಯ ಸ್ಥಿರಾಸ್ತಿ, ಪತಿ ಹೆಸರಲ್ಲಿ ರೂ.15.04 ಕೋಟಿ, ಪುತ್ರನ ಹೆಸರಲ್ಲಿ ರೂ.17.81 ಕೋಟಿ ಸೇರಿ ಒಟ್ಟು ರೂ. 56.98 ಕೋಟಿ ಮೌಲ್ಯದ ಸ್ಥಿರಾಸ್ತಿಗಳನ್ನು ಜೊಲ್ಲೆ ಕುಟುಂಬ ಹೊಂದಿದೆ.

ಇಡೀ ಕುಟುಂಬದ ಖಾತೆಯಲ್ಲಿ ರೂ.2.19 ಕೋಟಿ ಹಣವಿದೆ. ಜೊಲ್ಲೆ ಕುಟುಂಬ ಒಟ್ಟು ರೂ.22.41 ಕೋಟಿ ಸಾಲ ಹೊಂದಿದೆ. ರೂ.1.45 ಕೋಟಿಯ ಚಿನ್ನ ಹಾಗೂ ಬೆಳ್ಳಿ ಆರಭರಣ ಮತ್ತು ರೂ. 11.76 ಕೋಟಿಯ ಜಮೀನು ಕುಟುಂಬಕ್ಕಿದೆ. ರೂ. 15.20 ಕೋಟಿಯ ವಾಣಿಜ್ಯ ಭೂಮಿಯನ್ನು ಶಶಿಕಲಾ ಹೊಂದಿದ್ದಾರೆ. ರೂ. 21.85 ಕೋಟಿ ಮೌಲ್ಯದ ವಾಣಿಜ್ಯ ಭೂಮಿ ಹೊಂದಿದ್ದಾರೆ.

ಶಶಿಕಲಾ ಜೊಲ್ಲೆ ನೀಡಿದ ಆಸ್ತಿ ವಿವರದಲ್ಲಿ ಆಕಳು, ಎಮ್ಮೆ, ನಾಯಿಗಳೂ ಸೇರಿವೆ. ತಮ್ಮ ಬಳಿ 10 ಹೈಬ್ರೀಡ್ ಹಸುಗಳು, 17 ದೇಸಿ ಹಸುಗಳು, 6 ಎಮ್ಮೆ, ಒಂದು ಕುದುರೆ ಹಾಗೂ 4 ನಾಯಿಗಳು ಇವೆ ಎಂದೂ ಅವರು ವಿವರ ನೀಡಿದ್ದಾರೆ.




**ಅಬಕಾರಿ ಸಚಿವ ಕೆ.ಗೋಪಾಲಯ್ಯ ಆಸ್ತಿ ಎಂಟು ಪಟ್ಟು ಹೆಚ್ಚಳ !**

ಮಹಾಲಕ್ಷ್ಮಿ ಬಡಾವಣೆ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಅಬಕಾರಿ ಸಚಿವ ಕೆ. ಗೋಪಾಲಯ್ಯ ಅವರ ಕುಟುಂಬದ ಒಟ್ಟು ಆಸ್ತಿ ಮೂರು ವರ್ಷಗಳಲ್ಲೇ ಎಂಟು ಪಟ್ಟು ಹೆಚ್ಚಳವಾಗಿದೆ. ಇವರ ಕುಟುಂಬದ.ಬಳಿ 2019ರ ನವೆಂಬರ್‌ನಲ್ಲಿ ಒಟ್ಟು ರೂ. 11.99 ಕೋಟಿ ಮೌಲ್ಯದ ಆಸ್ತಿ ಇತ್ತು. ಈಗ ಅವರ ಕುಟುಂಬದ ಒಟ್ಟು ಆಸ್ತಿಯ ಮೌಲ್ಯ ರೂ. 96.15 ಕೋಟಿ. 2019 ರ ಉಪ ಚುನಾವಣೆ ಸಂದರ್ಭದಲ್ಲಿ ಇವರ ಕುಟುಂಬ ಒಟ್ಟು ರು.7 11.78 ಕೋಟಿ ಮೌಲ್ಯದ ಸ್ಥಿರಾಸ್ತಿ ಹೊಂದಿತ್ತು. ಈಗ ಅವರ ಕುಟುಂಬ ಹೊಂದಿರುವ ಒಟ್ಟು ಸ್ಥಿರಾಸ್ತಿ ರೂ. 95.91 ಕೋಟಿ ಮೌಲ್ಯ ಹೊಂದಿದೆ ಎಂದು ತಿಳಿಸಿದ್ದಾರೆ. ಇಬ್ಬರ ಆದಾಯದಲ್ಲೂ ಗಣನೀಯ ಏರಿಕೆಯಾಗಿದೆ.

2019ರಲ್ಲಿ ಇವರ ಅವರ ವಾರ್ಷಿಕ ಆದಾಯ ರೂ. 6.70 ಲಕ್ಷ ಇದ್ದು, ಈಗ ರೂ. 3.47 ಕೋಟಿಗೆ ಏರಿಕೆಯಾಗಿದೆ. ಹೇಮಲತಾ ಅವರ ವಾರ್ಷಿಕ ಆದಾಯ ರೂ. 5.21 ಲಕ್ಷದಿಂದ ರೂ. 3.37 ಕೋಟಿಗೆ. ಏರಿಕೆಯಾಗಿದೆ.

**ಎಚ್.ಡಿ. ರೇವಣ್ಣ**



ಹಾಸನ ಜಿಲ್ಲೆ ಹೊಳೆನರಸೀಪುರ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಎಚ್.ಡಿ. ರೇವಣ್ಣ 43 ಕೋಟಿ ರೂ. ಆಸ್ತಿ ಒಡೆಯರಾಗಿದ್ದಾರೆ. 43,37,56,441 ರೂ. ಮೌಲ್ಯದ ಆಸ್ತಿ ಹೊಂದಿರುವುದಾಗಿ ಅಫಿಡವಿಟ್ ಸಲ್ಲಿಸಿದ್ದಾರೆ. ಸ್ಥಿರಾಸ್ತಿ 7.36 ಕೋಟಿ ರೂ. ಚರಾಸ್ತಿ ಹಾಗೂ 36.01 ಕೋಟಿ ರೂ. ಸ್ಥಿರಾಸ್ತಿ ಇದೆ.

ಪತ್ನಿ ಭವಾನಿ ಹೆಸರಿನಲ್ಲಿ 38,25,22,777 ರೂ. ಆಸ್ತಿ ಇದ್ದು, 8.66 ಕೋಟಿ ರೂ. ಚರಾಸ್ತಿ ಇದ್ದರೆ, 29.58 ಕೋಟಿ ರೂ. ಸ್ಥಿರಾಸ್ತಿ ಹೊಂದಿದ್ದಾರೆ. ಭವಾನಿ ಬಳಿ 46 ಕೆಜಿ ಬೆಳ್ಳಿ, 3 ಕೆ.ಜಿ. ಚಿನ್ನ ಹಾಗೂ 25 ಕ್ಯಾರೆಟ್ ನಜ್ರದ ಆಭರಣ ಇದ್ದು, ಒಟ್ಟು 2.20 ಕೋಟಿ ರೂ. ಮೌಲ್ಯದ ಚಿನ್ನ, ಬೆಳ್ಳಿ ವಜ್ರದ ಆಭರಣದ ಹೊಂದಿದ್ದಾರೆ.

**ಎಂಟಿಬಿ ನಾಗರಾಜ್**



ರಾಜ್ಯದ ಶ್ರೀಮಂತ ಅಭ್ಯರ್ಥಿಗಳಲ್ಲಿ ಇವರೂ ಒಬ್ಬರು. 2019ರಲ್ಲಿ ನಡೆದ ಹೊಸಕೋಟೆ ವಿಧಾನಸಭಾ ಕ್ಷೇತ್ರದ ಮರು ಚುನಾವಣೆ ವೇಳೆ 1,015 ಕೋಟಿ ರೂ.ಆಸ್ತಿ ಘೋಷಿಸಿಕೊಂಡಿದ್ದ ಸಚಿವ ಎಂಟಿ ಬಿ ನಾಗರಾಜ್ ಈ ಬಾರಿ 1,510 ಕೋಟಿ ರೂ. ಘೋಷಣೆ ಮಾಡಿದ್ದಾರೆ.

71 ಕೋಟಿ ರೂ.ಸಾಲ ಮಾಡಿದ್ದಾರೆ. ಇವರ ಪತ್ನಿ ಶಾಂತಕುಮಾರಿ ರೂ. 410 ಕೋಟಿ ಆಸ್ತಿ ಒಡೆಯರಾಗಿದ್ದಾರೆ.

**ವಿ.ಸೋಮಣ್ಣ**



ಮೈಸೂರು ಜಿಲ್ಲೆ ವರುಣ ಮತ್ತು ಚಾಮರಾಜ ನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ, ಸಚಿವ ವಿ.ಸೋಮಣ್ಣ 13,82,14,769 ರೂ.ಮೌಲ್ಯದ ಆಸ್ತಿ ಘೋಷಣೆ ಮಾಡಿದ್ದಾರೆ.

ವಿವಿಧ ಬ್ಯಾಂಕ್, ಹಣಕಾಸು ಸಂಸ್ಥೆಗಳು ಮತ್ತಿತರ ಮೂಲಗಳಿಂದ 2.90 ಕೋಟಿ ರೂ. ಸಾಲ ಪಡೆದಿರುವುದಾಗಿಯೂ ಮಾಹಿತಿ ನೀಡಿದ್ದಾರೆ. ತಮ್ಮ ಪತ್ನಿ ಜೆ.ಶೈಲಜಾ ಹೆಸರಿನಲ್ಲಿ 13,01,63,851 ರೂ. ಮೌಲ್ಯದ ಚರಾಸ್ತಿ ಹಾಗೂ 21.40 ಕೋಟಿ ರೂ. ಮೌಲ್ಯದ ಸ್ಥಿರಾಸ್ತಿ ಘೋಷಣೆ ಮಾಡಿಕೊಂಡಿದ್ದಾರೆ.



**ಶರತ್ ಬಚ್ಚೇಗೌಡ**

ಕ್ಷೇತ್ರ: ಹೊಸಕೋಟೆ
ಪಕ್ಷ: ಕಾಂಗ್ರೆಸ್
ಒಟ್ಟು ಆಸ್ತಿ: ರೂ104.74 ಕೋಟಿ
ಶಿಕ್ಷಣ: ಎಂ.ಎಸ್ (ಎಂಜಿನಿಯ–ರಿಂಗ್)
ಅಪರಾಧ ಪ್ರಕರಣ: 1
ಚರಾಸ್ತಿ: ರೂ31.49 ಕೋಟಿ, ಸ್ಥಿರಾಸ್ತಿ: ರೂ60 ಕೋಟಿ
ಎಷ್ಟು ಹೆಚ್ಚಳ: ರೂ31 ಕೋಟಿ ಇಳಿಕೆ
ಸಾಲ: ರೂ1.44 ಕೋಟಿ
ಪತ್ನಿ ಹೆಸರಲ್ಲಿರುವ ಆಸ್ತಿ:ರೂ74 ಕೋಟಿ.

**ಗಾಲಿ ಲಕ್ಷ್ಮೀ ಅರುಣಾ**



ಕ್ಷೇತ್ರ: ಬಳ್ಳಾರಿ ನಗರ
ಪಕ್ಷ: ಕಲ್ಯಾಣ ರಾಜ್ಯ ಪ್ರಗತಿ ಪಕ್ಷ
ಒಟ್ಟು ಆಸ್ತಿ:ರೂ200.61 ಕೋಟಿ
ಶಿಕ್ಷಣ:ಪದವಿ ಅಪೂರ್ಣ
ಅಪರಾಧ ಪ್ರಕರಣ: ಇಲ್ಲ
ಚರಾಸ್ತಿ: ರೂ96.23 ಕೋಟಿ,
ಸ್ಥಿರಾಸ್ತಿ:ರೂ104.38 ಕೋಟಿ
ಸಾಲ: ರೂ171.12 ಕೋಟಿ
ಮಕ್ಕಳ ಹೆಸರಲ್ಲಿರುವ ಆಸ್ತಿ:ಮಗ ಕಿರೀಟಿ ರೆಡ್ಡಿ ಬಳಿ ರೂ1.24 ಕೋಟಿ ಮೌಲ್ಯದ ಸ್ಥಿರಾಸ್ತಿ



**ಬಿ.ವೈ.ವಿಜಯೇಂದ್ರ**

ಕ್ಷೇತ್ರ:ಶಿಕಾರಿಪುರ,
ಪಕ್ಷ: ಬಿಜೆಪಿ
ಒಟ್ಟು ಆಸ್ತಿ: ರೂ123.74 ಕೋಟಿ
ಶಿಕ್ಷಣ: ಎಲ್‌ಎಲ್‌ಬಿ
ಅಪರಾಧ ಪ್ರಕರಣ: ಎರಡು
ಚರಾಸ್ತಿ: ರೂ67.67 ಕೋಟಿ,
ಸ್ಥಿರಾಸ್ತಿ: ರೂ56.57 ಕೋಟಿ
ಸಾಲ: ರೂ34.52 ಕೋಟಿ
ಪತ್ನಿಯ ಹೆಸರಲ್ಲಿರುವ ಆಸ್ತಿ: ರೂ18.95 ಕೋಟಿ
ಮಕ್ಕಳ ಹೆಸರಲ್ಲಿರುವ ಆಸ್ತಿ: ರೂ1.39 ಕೋಟಿ .

## ಕೊಳ್ಳಬಸವ ನಾಗಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ

ಬೆಳಗಾವಿ: ತಾಲೂಕಿನ ಚಂದನಹೊಸೂರ ಗ್ರಾಮದ ಪರಮಪೂಜ್ಯ ಶ್ರೀ ನಾಗಯ್ಯಾ ಅಜ್ಜನವರ ನೇತ್ರತ್ವದಲ್ಲಿ ಶನಿವಾರ ದಿ 22 ಮತ್ತು ರವಿವಾರ ದಿ. 23 ರಂದು ಎರಡು ದಿನಗಳ ಕಾಲ ಶ್ರೀ ಕೊಳ್ಳಬಸವ ನಾಗಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮ ಜರುಗುವುದು.

ಶನಿವಾರ ದಿ. 22 ರಂದು ಸಾಯಂಕಾಲ 8 ಗಂಟೆಗೆ ಭಜನಾ ಕಾರ್ಯಕ್ರಮ ಜರುಗುವುದು. ರವಿವಾರ ದಿ. 23 ರಂದು ಮುಂಜಾನೆ 8 ಗಂಟೆಗೆ ಶ್ರೀ ಮಹೇಶಸ್ವಾಮಿಗಳು ಕಂಬಳಿಮಠ ಇವ–ರಿಂದ ಅಭಿಷೇಕ, ಮದ್ಯಾಹ್ನ 12.30 ಗಂಟೆಗೆ ಚಂದನಹೊಸೂರಿನ ಶ್ರೀ ಸಿದ್ದಲಿಂಗ ದೇವರು ಹಿರೇಮಠ ಇವರ ಸಾನಿಧ್ಯದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಜರುಗುವವು. ಹೆಚ್ಚಿನ ಮಾಹಿತಿಗಾಗಿ ಮೊ. 9972105120, 9538147326, 8970480722, 9916661385, 9901523852 ಇವರನ್ನು ಸಂಪರ್ಕಿಸಿ ಭಕ್ತಾಧಿಗಳು ಹೆಸರು ನೊಂದಾಯಿಸಿ ಇದರ ಸದುಪಯೋಗ ಪಡೆಕೊಳ್ಳಲು ಜಾತ್ರಾ ಕಮೀಟಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಚುನಾವಣಾ ಜಾಹೀರಾತು: ಪೂರ್ವಾನುಮತಿ ಕಡ್ಡಾಯ

ಬೆಳಗಾವಿ: ಕರ್ನಾಟಕ ವಿಧಾನಸಭೆ ಚುನಾವಣೆ–2023 ಅಂಗವಾಗಿ ಮೇ 10, 2023ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 9 ಹಾಗೂ 10 ರಂದು ಅಭ್ಯರ್ಥಿಗಳು/ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(–ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 9 ಹಾಗೂ 10ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 7 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ.

**ಪೂರ್ವಾನುಮತಿಗೆ ಅರ್ಜಿ ಲಭ್ಯ:**ಮೇ91 ಹಾಗೂ 10 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ– ಈ ಕಚೇರಿಯಿಂದ ಪಡೆಯಬಹುದು. **ಎಲೆಕ್ಟ್ರಾನಿಕ್ ಮಾಧ್ಯಮಗಳಿಗೆ ಮಾರ್ಗಸೂಚಿ:**ಮತದಾನಕ್ಕೆ ನಿಗದಿಪಡಿಸಿರುವ ಅವಧಿ ಕೊನೆಗೊಳ್ಳುವ 48 ಗಂಟೆಗಳ ಮುಂಚೆ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ (ಟಿವಿ, ಸಿನಿಮಾಟೋಗ್ರಾಫ್, ದೃಶ್ಯಶ್ರವಣ) ಚುನಾವಣಾ ಸಂಬಂಧಿ ವಿಷಯಗಳ ಪ್ರಸಾರವನ್ನು ಪ್ರಜಾಪ್ರತಿನಿಧಿ ಕಾಯ್ದೆ–1951 ರ ಕಲಂ 126 ರ ಪ್ರಕಾರ ನಿಷೇಧಿಸಲಾಗಿದೆ. ಚುನಾವಣಾ ಸಂಬಂಧಿ ವಿಷಯ ಎಂದರೆ ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಅಥವಾ ಪರಿಣಾಮ ಬೀರುವಂತಹ ವಿಷಯಗಳಾಗಿರುತ್ತವೆ. ಈ ಕಾಯ್ದೆಯನ್ನು ಉಲ್ಲಂಘಿಸುವವರಿಗೆ ಎರಡು ವರ್ಷಗಳವರೆಗೆ ವಿಸ್ತರಿಸಬಹುದಾದ ಕಾರಾಗೃಹ ಶಿಕ್ಷೆ ಅಥವಾ ದಂಡ ಅಥವಾ ದಂಡ ಮತ್ತು ಶಿಕ್ಷೆ ಎರಡನ್ನೂ ವಿಧಿಸಬಹುದಾಗಿದೆ.ಟಿವಿ/ರೇಡಿಯೋ/ಕೇಬಲ್ ನೆಟವರ್ಕ ಮತ್ತು ಎಲ್ಲ ಡಿಜಿಟಲ್ ಮಾಧ್ಯಮಗಳು ಮತದಾನಪೂರ್ವ 48 ಗಂಟೆಗಳ ಅವಧಿಯಲ್ಲಿ ಚುನಾವಣೆ ಸಂಬಂಧಿ ವಿಷಯಗಳು ಪ್ರಸಾರ ಮಾಡದಂತೆ ಕ್ರಮವಹಿಸಬೇಕು.ಕಾರ್ಯ ಕ್ರಮದಲ್ಲಿ ಭಾಗವಹಿಸುವವರು (ಪ್ಯಾನಲಿಸ್ಟ್) ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಪರ ಅಥವಾ ವಿರೋಧವಾಗಿರುವ ಅಭಿಪ್ರಾಯಗಳು/ಮನವಿಗಳು ಮತ್ತು ಚುನಾವಣಾ ಫಲಿತಾಂಶದ ಮೇಲೆ ಪ್ರಭಾವ ಬೀರುವಂತಹ ವಿಷಯಗಳನ್ನು ಕೂಡ ಪ್ರಸಾರ ಮಾಡಕೂಡದು.ನಿಗದಿತ 48 ಗಂಟೆಗಳ ಅವಧಿಯಲ್ಲಿ ಓಪಿನಿಯನ್ ಪೋಲ್ ಫಲಿತಾಂಶ ಪ್ರಕಟಿಸುವುದು. ಚರ್ಚೆ ಅಥವಾ ವಿಶ್ಲೇಷಣೆ ಏರ್ಪಡಿಸುವುದು. ಅದೇ ರೀತಿ ಚುನಾವಣೋತ್ತರ ಸಮೀಕ್ಷೆಗಳನ್ನು ಪ್ರಸಾರ ಮಾಡುವುದು ಕೂಡ ಪ್ರಜಾಪ್ರತಿನಿಧಿ ಕಾಯ್ದೆ–1951 ರ ಕಲಂ 126 ರ ವ್ಯಾಪ್ತಿಯಲ್ಲಿ ಬರುತ್ತದೆ.ಕರ್ನಾಟಕ ವಿಧಾನಸಭೆ ಚುನಾವಣೆ–2023ರ ಅಂಗವಾಗಿ ಮೇ 10 ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಆದ್ದರಿಂದ ಎಲ್ಲ ಎಲೆಕ್ಟ್ರಾನಿಕ್ ಹಾಗೂ ಡಿಜಿಟಲ್ ಮಾಧ್ಯಮಗಳು ಮೇ 8 ರ ಸಂಜೆ 6 ಗಂಟೆಯಿಂದ ಮೇ 10 ರ ಸಂಜೆ 6.30 ಗಂಟೆಯವರೆಗೆ ಮೇಲ್ಕಂಡ ನಿರ್ದೇಶನಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 21.04.2023 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 04.00 ಘಂಟೆಯವರೆಗೆ ಕ.ವಿ.ಪ್ರ.ನಿ.ನಿ. ವತಿಯಿಂದ ಮೊದಲನೇಯ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದ–ರಿಂದ 110 ಕೆ.ವ್ಹಿ. ಹುದಲಿ ಉಪಕೇಂದ್ರದಿಂದ ಸರಬರಾಜು ಆಗುವ ಹುದಲಿ, ನಂದಿ ಕುಡಿಯುವ ನೀರಿನ ಘಟಕ, ಕುಮರಿ, ರಂಗದೋಳಿ, ತುಮ್ಮರಗುದ್ದಿ, ಸೋಮನಟ್ಟಿ, ಕಬಲಾಪೂರ, ಚಂದೂರ, ಖನಗಾಂವ ಕೆ.ಎಚ್, ಖನಗಾಂವ ಬಿ.ಕೆ, ಅಷ್ಟೆ, ಮುಚ್ಚಂಡಿ, ಕಲಕಾಂಬ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

# ದೇಶಕ್ಕೆ ನರೇಂದ್ರ ರಾಜ್ಯಕ್ಕೆ ವಿಜಯೇಂದ್ರ ಎಂಬ ಘೋಷಣೆ; ಭಾರಿ ಜನ ಸಾಗರ ದೊಂದಿಗೆ ಯಡಿಯೂರಪ್ಪ ಪುತ್ರ ಬಿ.ವೈ.ವಿಜಯೇಂದ್ರ ನಾಮಪತ್ರ ಸಲ್ಲಿಕೆ

ಶಿವಮೊಗ್ಗ: ಶಿಕಾರಿಪುರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಇಂದು ಇಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಹಾಗೂ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರ ಪುತ್ರ ಬಿ.ವೈ. ವಿಜಯೇಂದ್ರ ಭಾರೀ ಜನಸಾಗರದೊಂದಿಗೆ ಮೆರವಣಿಗೆಯಲ್ಲಿ ತೆರಳಿ ನಾಮಪತ್ರ ಸಲ್ಲಿಸಿದರು.

ಉಮೇದುವಾರಿಕೆ ಸಲ್ಲಿಕೆಗೂ ಮೊದಲು ಶಿಕಾರಿಪುರದ ಶ್ರೀ ಹುಚ್ಚರಾಯ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ಜೊತೆಗೆ ರಾಯರ ಮಠಕ್ಕೂ ಭೇಟಿ ನೀಡಿ ವಿಶೇ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಸಂಸದ ಹಾಗೂ ಸಹೋದರ ಬಿ.ವೈ. ರಾಘವೇಂದ್ರ ಮೊದಲಾದವರು ಇದ್ದರು.

ಮೆರವಣಿಗೆಯಲ್ಲಿ ನಾಯಕರಾದ ಬಿ.ಎಸ್. ಯಡಿಯೂರಪ್ಪ. ಎಂಟಿಬಿ ನಾಗರಾಜ್, ಕೇಂದ್ರ ಸಚಿವ ನಾರಾಯಣಸ್ವಾಮಿ, ನಟಿ ಶ್ರುತಿ, ರಾಜೀವ್, ಶಾಸಕ ಎಸ್. ರುದ್ರೇಗೌಡ, ಸಂಸದ ಬಿ.ವೈ. ರಾಘವೇಂದ್ರ, ಬಿಜೆಪಿ ಜಿಲ್ಲಾಧ್ಯಕ್ಷ ಟಿ.ಡಿ. ಮೇಘರಾಜ್



ಮೊದಲಾದವರು ಭಾಗಿಯಾಗಿದ್ದರು.

ಮೆರವಣಿಗೆ ಉದ್ದಕ್ಕೂ ಸಾವಿರಾರು ಮಂದಿ ಬಿಜೆಪಿ ಕಾರ್ಯಕರ್ತರು ಹಾಗೂ ಅಭಿಮಾನಿಗಳು ನೆರೆದಿದ್ದರು. ಮೆರವಣಿಗೆ ಉದ್ದಕ್ಕೂ ಪ್ರಧಾನಿ ನರೇಂದ್ರ ಮೋದಿ, ಬಿ.ಎಸ್. ಯಡಿಯೂರಪ್ಪ, ಬಿ.ವೈ. ವಿಜಯೇಂದ್ರ ಪರ ಘೋ?ಣೆ ಕೂಗಿದರು. ದೇಶಕ್ಕೆ ನರೇಂದ್ರ, ರಾಜ್ಯಕ್ಕೆ ವಿಜಯೇಂದ್ರ ಎಂಬ ಘೋಷಣೆ ಮುಗಿಲು ಮುಟ್ಟಿತ್ತು.

**ಕಾರ್ಯಕರ್ತರ ಪಡೆಯೇ ಶಕ್ತಿ:**

ನಾಮಪತ್ರ ಸಲ್ಲಿಕೆ ಬಳಿಕ ಹೇಳಿಕೆ ನೀಡಿದ ವಿಜಯೇಂದ್ರ, ಹುಚ್ಚುರಾಯಸ್ವಾಮಿಗೆ ಪೂಜೆ ಸಲ್ಲಿಸಿ, ರಾಯರ ಮಠದಲ್ಲಿ ಪೂಜೆ ಸಲ್ಲಿಸಿ ನಾಮಪತ್ರ ಸಲ್ಲಿಸಿದ್ದೇನೆ. ನಮ್ಮ ಶಕ್ತಿ ಕಾರ್ಯಕರ್ತರ ಪಡೆ. ಕಾರ್ಯಕರ್ತರು ಶಕ್ತಿಯನ್ನು ತುಂಬುವ ಕೆಲಸ ಮಾಡಿದ್ದಾರೆ. ಕಾರ್ಯಕರ್ತರ ಪಡೆಯಿಂದ ದೊಡ್ಡ ಶಕ್ತಿ ತಂದುಕೊಟ್ಟಿದೆ. ಯುವಕರ ಹೊಸ ಪಡೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ, ರಾಜ್ಯ ಸರ್ಕಾರ ಅವರು ನಡೆಸಿರುವ ಅಭಿವೃದ್ಧಿ ಮೆಚ್ಚಿ ನಮ್ಮ ಜೊತೆ ಸೇರಿದ್ದಾರೆ ಎಂದರು.

ಕ್ಷೇತ್ರದಲ್ಲಿ ಮತದಾರರು ಯಡಿಯೂರಪ್ಪ ಅವರಿಗೆ, ಸಂಸದ ರಾಘವೇಂದ್ರ ಅವರಿಗೆ ಆಶೀರ್ವಾದ ಮಾಡಿದ್ದಾರೆ. ಅದೇ ರೀತಿ ನನಗೂ ಆಶೀರ್ವಾದ ಮಾಡುತ್ತಾರೆ ಎಂಬ ವಿಶ್ವಾಸ ಇದೆ. ಶಿಕಾರಿಪುರದಲ್ಲಿ ಪ್ರಚಾರ ಮಾಡುವ ಜೊತೆಗೆ ರಾಜ್ಯದಲ್ಲಿ ಬೇರೆ ಬೇರೆ ಕಡೆ ಒಂದು ವಾರ ಪ್ರಚಾರ ಮಾಡುತ್ತೇನೆ. ಈ ಬಾರಿ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದರು.

## ಪ್ರಮೋದ್ ಮತಾಲಿಕ್ ನಾಮಪತ್ರ ಸಲ್ಲಿಕೆ



ಉಡುಪಿ: ಶ್ರೀರಾಮ ಸೇನೆಯ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ಅವರು ಉಡುಪಿ ಜಿಲ್ಲೆಯ ಕಾರ್ಕಳದಿಂದ ಸ್ವತಂತ್ರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ.

ಮುತಾಲಿಕ್ ಅವರ ಅಫಿಡವಿಟ್‌ನಲ್ಲಿ ಕಾಸಿಗಿಂತ ಕೇಸೇ ಜಾಸ್ತಿಯಿರುವ ಮಾಹಿತಿ ಬಹಿರಂಗಗೊಂಡಿದೆ. ಪ್ರಮೋದ್ ಮತಾಲಿಕ್ ಬಳಿ ಸ್ಥಿರಾಸ್ತಿ, ವಾಹನ, ಸಾಲ ಇಲ್ಲ. ಮುತಾಲಿಕ್ ಕೈಯಲ್ಲಿ 10,500 ರೂ. ನಗದು, ಎರಡು ಬ್ಯಾಂಕುಗಳಲ್ಲಿ 2,63,500 ರೂ. ಇದೆ ಎಂದು ಘೋಷಿಸಿಕೊಂಡಿದ್ದಾರೆ.

ರಾಜ್ಯದ 7 ಠಾಣೆಗಳಲ್ಲಿ ಸೌಹಾರ್ದಕ್ಕೆ ಧಕ್ಕೆ ಕೇಸು ದಾಖಲಾಗಿದೆ. ಪ್ರಚೋದನಾಕಾರಿ ಭಾಷಣ ಮತ್ತು ಸಶಸ್ತ್ರ ಕಾಯ್ದೆ ಉಲ್ಲಂಘನೆ, ಮಾನನಷ್ಟ ಮೊಕದ್ದಮೆ, ಜೀವ ಬೆದರಿಕೆ, ಧರ್ಮಗಳ ನಡುವೆ ದ್ವೇಷ ಭಾವನೆ, ಧಾರ್ಮಿಕ ಭಾವನೆಗೆ ಧಕ್ಕೆ, ಅವಾಚ್ಯ ಶಬ್ದಗಳಿಂದ ನಿಂದನೆ, ಕೋಮು ಗಲಭೆ, ಜೀವ ಬೆದರಿಕೆ, ಪ್ರಚೋದನಕಾರಿ ಹೇಳಿಕೆ, ಅವಹೇಳನ, ಆದೇಶ ಉಲ್ಲಂಘನೆ ಕೇಸ್‌ಗಳು ದಾಖಲಾಗಿದೆ ಎಂದು ಆಯೋಗಕ್ಕೆ ತಿಳಿಸಿದ್ದಾರೆ.

## ದಾಖಲೆ ಇಲ್ಲದ 7ಕೆಜಿ 700ಗ್ರಾ ಚಿನ್ನಾಭರಣ ಸಾಗಾಟ



ಧಾರವಾಡ: ಧಾರವಾಡ ತಾಲೂಕಿನ ತೇಗೂರು ಚೆಕ್‌ಪೋಸ್ಟ್‌ನಲ್ಲಿ ದಾಖಲೆ ಇಲ್ಲದ 7ಕೆಜಿ 700ಗ್ರಾ ಚಿನ್ನಾಭರಣಗಳನ್ನು ವಶಕ್ಕೆ ಪಡೆಯಲಾಗಿದೆ.

ಯಾವುದೇ ಅನುಮತಿ ಇಲ್ಲದೇ ಸಾಗಾಟ ಮಾಡುತ್ತಿದ್ದ ಆರೋಪದಲ್ಲಿ 5 ಕೋಟಿ ಮೌಲ್ಯದ ಚಿನ್ನಾಭರಣಗಳನ್ನು ಚುನಾವಣಾಧಿಕಾರಿಗಳು ಜಪ್ತಿ ಮಾಡಿದ್ದಾರೆ ಎಂದು ತಿಳಿದುಬಂದಿದೆ.

ಬೆಳಗಾವಿಯಿಂದ ಬೆಂಗಳೂ–ರಿಗೆ ಲಾಜಿಸ್ಟಿಕ್ ವಾಹನದಲ್ಲಿ ಚಿನ್ನಾಭರಣಗಳನ್ನ ಸಾಗಾಟ ಮಾಡಲಾಗುತ್ತಿತ್ತು.

ಪೊಲೀಸರು 7ಕೆಜಿ, 700ಗ್ರಾಂ ಚಿನ್ನಾಭರಣಗಳನ್ನ ವಶಕ್ಕೆ ಪಡೆ ದು ಆದಾಯ ಮತ್ತು ತೆರಿಗೆ ಇಲಾಖೆಗೆ ಮಾಹಿತಿ ನೀಡಿದ್ದಾರೆ.

## ಟಿ.ಹೆಚ್.ದೀಪಾ ಸುರೇಶ್ ಬಾಬು ಮಿಂಚಿನ ಪ್ರಚಾರ

ಬಳ್ಳಾರಿ: ಬಳ್ಳರಿ ಜಿಲ್ಲೆಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಕೋಳೂರು ಗ್ರಾಮಕ್ಕೆ ಶ್ರೀಮತಿ ಟಿ ಹೆಚ್ ದೀಪಾ ಸುರೇಶ್ ಬಾಬುರವರು ತೆರಳಿ ಗ್ರಾಮದ ವಿವಿಧ ದೇವಸ್ಥಾನಗಳಿಗೆ ಭೇಟಿ ನೀಡಿ ದಿವ್ಯ ದರ್ಶನ ಪಡೆದು ಕ್ಷೇತ್ರದ ಸಮೃದ್ಧಿಗಾಗಿ ಪ್ರಾರ್ಥಿಸಿದರು.ಬಳಿಕ ಗ್ರಾಮದ ಹಲವು ಮನೆಗಳಿಗೆ ತೆರಳಿ ನಮ್ಮ ಕಂಪ್ಲಿ ವಿಧಾನಸಭಾ ಕ್ಷೇತ್ರದ ಜನಪ್ರಿಯ ನಾಯಕರಾದ ಟಿ ಹೆಚ್ ಸುರೇಶ್ ಬಾಬು ರವರು ತಮ್ಮ 10 ವರ್ಷದ ಅಧಿಕಾರದ ಅವಧಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳ ಕುರಿತು ಮಾಹಿತಿ ತಿಳಿಸಿ, ಈ ಬಾರಿಯ ಚುನಾವಣೆಯಲ್ಲಿ, ಮತ್ತೊಮ್ಮೆ ನಮ್ಮ ಕಂಪ್ಲಿ ಕ್ಷೇತ್ರದ ಶ್ರಯೋಭಿವೃದ್ಧಿಗಾಗಿ ಟಿ ಹೆಚ್ ಸುರೇಶ್ ಬಾಬುರವರನ್ನು ಬೆಂಬಲಿಸುವಂತೆ ಮನವಿ ಮಾಡಿದರು. ಇದೆ ವೇಳೆ ಗ್ರಾಮದಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಮಾಹಿತಿಯನ್ನೂ ಪಡೆದು ಟಿ ಹೆಚ್ ಸುರೇಶ್ ಬಾಬು ರವರ ನೇತೃತ್ವದಲ್ಲಿ ಪರಿಹರಿಸುವ ಭರವಸೆಯನ್ನು ನೀಡಿದರು.

## ಸತೀಶ್ ಅಣ್ಣಾ ಜಾರಕಿಹೊಳಿಗೆ ಮತ ನೀಡಿ: ಮನವಿ

ಬೆಳಗಾವಿ: ಯಮಕನಮರಡಿ ಮತಕ್ಷೇತ್ರದ ಮುಂದಿನ ಭರವಸೆಯ ಬೆಳಕು ಶ್ರೀ ರಾಹುಲ್ ಅಣ್ಣಾ ಜಾರಕಿಹೊಳಿ ಅವರು ಯಮಕನಮರಡಿ ಮತಕ್ಷೇತ್ರದಲ್ಲಿ ಬರುವ ಗುಡದೇರಿ ಬಾಗದ ಗ್ರಾಮ ದೇವತೆಯಾದ ಶ್ರೀ ಕಮಲಾ ದೇವಿಯ ದರ್ಶನ ಪಡೆದು. ಶಹಂಬದಾರ್ ಚಿಕ್ಕಲದಿನ್ನಿ ಗುಟಗುದ್ದಿ ಕ–ರಿಕಟ್ಟಿ ಗಜಪತಿ ಗ್ರಾಮದಲ್ಲಿ ಕಾರ್ಯಕರ್ತರ ಬೂತ ಮಟ ಸಭೆಯಲ್ಲಿ ಭಾಗವಹಿಸಿ



ಮುಂಬರುವ ಮೇ 10 ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಶ್ರೀ ಸತೀಶ್ ಅಣ್ಣಾ ಜಾರಕಿಹೊಳಿ ಅವರಿಗೆ ಮತ ನೀಡಿ ಎಂದು ಜನರಲ್ಲಿ ಮನವಿ ಮಾಡಿಕೊಂಡರು.

ಇದೆ ವೇಳೆ ಕಾಂಗ್ರೆಸ್ ಪಕ್ಷ ಜಾರಿಗೊಳಿಸಿರುವ 4 ಹೊಸ ಗ್ಯಾರಂಟಿ ಯೋಜನೆಗಳ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಮಂಜುಗೌಡ ಪಾಟೀಲ್ ಯಲ್ಲಪ್ಪ ಹಂಚಿನಮನಿ ಈರಪ್ಪ ಬಂಜಿರಾಮ ರಾಮಚಂದ್ರ ನಾಯಕ್ ಬಸ್ಸು ನಾಯಿಕ ಬಸ್ಸು ಡುಮ್ಮನಾಯಿಕ ಗಂಗಾರಾಮ ಇರಬಾಂವಿ ಅಡವೇಪ್ಪಾ ಬಾಗರಾಯಿ ಬಾಬು ಕೂಡಗ್ನವರ ಗ್ರಾಮ ಪಂಚಾಯಿತಿ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರು ಊರಿನ ಗುರು ಹಿರಿಯರು ಯುವಕರು ಮಹಿಳೆಯರು ಗ್ರಾಮಸ್ಥರು ಯುವಕರು ಆಪ್ತ ಸಹಾಯಕರಾದ ಮಾರುತಿ ಗುಟಗುದ್ದಿ ಲಗಮಪ್ಪಾ ಪನಗುದ್ದಿ ಉಪಸ್ಥಿತರಿದ್ದರು.

## ಕಾಂಗ್ರೆಸ್‌ಗೆ, ಬಿಜೆಪಿಗೆ ಪೈಪೋಟಿ, ಕೆಆರ್‌ಪಿಪಿ, ಜೆಡಿಎಸ್ ಲೆಕ್ಕಕ್ಕಿಲ್ಲ: ಸೋಮಶೇಖರರೆಡ್ಡಿ

ಬಳ್ಳಾರಿ: ಕೆಆರ್‌ಪಿಪಿಯವರು ಕೂಡ ಚುನಾವಣೆಗೆ ಸಂಬಂಧಿಸಿ ಸೀರಿಯಸ್ ಆಗಿ ಇದ್ದಾರೆ, ನಮ್ಮದು ರಾಷ್ಟ್ರೀಯ ಪಕ್ಷ, ಆ ರೀತಿ ಯಾರೂ ಒಪ್ಪಂದ ಮಾಡಿಕೊಳ್ಳಲಾಗುವುದಿಲ್ಲ. ಒಳ ಒಪ್ಪಂದ ಆಗಿಲ್ಲ ಎಂದು ಬಳ್ಳಾರಿ ನಗರ ಬಿಜೆಪಿ ಅಭ್ಯರ್ಥಿ ಶಾಸಕ ಸೋಮಶೇಖರರೆಡ್ಡಿ ಹೇಳಿದರು.ಬಳ್ಳಾರಿಯ ಅಶೋಕ ನಗರದಲ್ಲಿರುವ ಅವರ ಸ್ವನಿವಾಸದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಆರ್‌ಪಿಪಿ ಅಭ್ಯರ್ಥಿ ಇಷ್ಟು ದಿನ ಮನೆಯಲ್ಲಿದ್ದು ಈಗ ಏಕಾಏಕಿ ಶಾಸಕರಾಗಬೇಕೆಂದರೆ ಹೇಗೆ? ಹೀಗಾಗಿ ಆ ಅಭ್ಯರ್ಥಿಯ ಕುರಿತು ಮಾತನಾಡಿದೆನಷ್ಟೇ. ಜನಾರ್ದನ ರೆಡ್ಡಿ ಪಕ್ಷ ಸ್ಥಾಪನೆ ಆದ ನಂತರ ನಮ್ಮನ್ನು ಕರೆದರು ನಾವು ಹೋಗಲಿಲ್ಲ, ರಾಷ್ಟ್ರೀಯ ಪಕ್ಷ ಬಿಟ್ಟು ಬರಲ್ಲ ಅಂತ ಹೇಳಿದೆವು, ಅದಕ್ಕಾಗಿಯೇ ನನ್ನ ವಿರುದ್ಧ ಅಭ್ಯರ್ಥಿಯನ್ನು ಹಾಕಿದರು ಎಂದರು.

ಬಳ್ಳಾರಿ ಗ್ರಾಮೀಣ ಕ್ಷೇತ್ರಕ್ಕೆ ಕೆಆರ್‌ಪಿಪಿ ಅಭ್ಯರ್ಥಿ ಹಾಕದಿರುವುದಕ್ಕೆ ಕಾರಣ ನನಗೆ ಗೊತ್ತಿಲ್ಲ. ಜನಾರ್ದನ



ರೆಡ್ಡಿಯವರೇ ಹೇಳಬೇಕು. ಆದ–'ರೆ ನಾನು ಯಾವುದೇ ಒಪ್ಪಂದ ಮಾಡಿಕೊಂಡಿಲ್ಲ ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ನನ್ನ ಕಾರ್ಯಕರ್ತರು ನನ್ನ ಜೊತೆಗೇ ಇದ್ದಾರೆ. ಕೆಲವರು ಧನ ದಾಹದಿಂದ ಅಲ್ಲಿಲ್ಲಿ ಹೋಗಿದ್ದಾರೆ. ಕೆಲವರು ಜಂಪಿಂಗ್ ಜಪಾಂಗ್ ಇರುತ್ತಾರೆ ಏನೂ ಮಾಡಲಾಗುವುದಿಲ್ಲ ಎಂದು ಬೇರೆ ಪಕ್ಷ ಸೇರುತ್ತಿರುವ ತಮ್ಮ ಕಾರ್ಯಕರ್ತರ ಬಗ್ಗೆ ಪ್ರತಿಕ್ರಿಯಿಸಿದ ಶಾಸಕ ರೆಡ್ಡಿ, ಶೆಟ್ಟರ್ ಅವರಿಗೆ ಸಾಕಷ್ಟು ಅಧಿಕಾರ ಅವಕಾಶ ನೀಡಲಾಗಿತ್ತು, ಅವರು ಅಪ್ಪಟ ನಿಷ್ಠಾವಂತರು, ಆದ–'ರೆ ಅಂಥವರು ಪಕ್ಷ ಬಿಟ್ಟು ಹೋದರು. ತಾಳ್ಮೆಯಿಂದ ಇರಬೇಕಿತ್ತು. ಅವರು ಕಾಂಗ್ರೆಸ್ ಸೇರಿರುವುದರಿಂದ ನಮ್ಮ ಕ್ಷೇತ್ರದ ಮೇಲೆ ಯಾವುದೇ ಪ್ರಭಾವ ಆಗುವುದಿಲ್ಲ. ನಮ್ಮ ಭಾಗದ ವೀರಶೈವರು ಬೇರೆ. ಇಲ್ಲೇನೂ ಪರಿಣಾಮ ಆಗಲ್ಲ. ಶೆಟ್ಟರ್ ಅವರ ನಿರ್ಧಾರ ತಪ್ಪು ಎಂದರು.ಬಳ್ಳಾರಿ ನಗರದಾದ್ಯಂತ ಇಂಚಿಂಚೂ ಅಡ್ಡಾಡಿ ಪರಿಚಯ ಹೊಂದಿದ್ದೇನೆ. ಜನರು ಅವಕಾಶ ನೀಡಿದರೆ ಮತ್ತಷ್ಟು ಅಭಿವೃದ್ಧಿ ಪಡಿಸುವೆ. ನನಗೆ ನನ್ನದೇ ಆದ ಕಣ್ಣೋಟಗಳಿವೆ ಎಂದು ಹೇಳಿದ ಅವರು, ಕೆಎಂಈ–ಆರ್‌ಸಿಯಿಂದಲೇ ಬಳ್ಳಾರಿ ನಗರವನ್ನು ಅಭಿವೃದ್ಧಿಪಡಿಸುವೆ ಎಂದರು.

ಮೊದಲಿನಿಂದ 2001ರಿಂದ ಬಿಜೆಪಿ ಕಾರ್ಯಕರ್ತನಾಗಿ ಸೇರ್ಪಡೆ ಆಗಿ ಇಲ್ಲಿಯವರೆಗೆ ಕೆಲಸ ಮಾಡಿರುವೆ. ನಗರಸಭೆ ಸದಸ್ಯರಾಗಿ, ಅಧ್ಯಕ್ಷರಾಗಿ, ಮಹಾನಗರ ಪಾಲಿಕೆಯ ಮೇಯರ್ ಆಗಿ ಕೆಲಸ ಮಾಡಿರುವೆ. ನಂತರ ಶಾಸಕನಾಗಿ ಕೆಲಸ ಮಾಡಿರುವೆ. ಪ್ರತಿ ವಾರ್ಡ್ ಕೂಡ ನನಗೆ ಮೇಯರ್ ಆದ ವೇಳೆ ಚಿರಪ–ರಿಚಿತ ಆದವು. 2008ರಲ್ಲಿ ಕ್ಷೇತ್ರ ಪುನರ್ವಿಂಗಡಣೆ ವೇಳೆ ನಗರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾದೆ. ನಗರ ಅಭಿವೃದ್ಧಿ ಆಯಿತು. ಆಗಿನ ಸಿಎಂ ಬಿಎಸ್ ವೈ ಸಹಕಾರ ನೀಡಿದರು. ಬೈಪಾಸ್ ರಸ್ತೆ ಮಾಡಿದೆವು, ನಗರದಲ್ಲಿ ಉತ್ತಮ ರಸ್ತೆ ನಿರ್ಮಾಣ ಆದ–'ವು ಎಂದರು.ಕುಡಿಯುವ ನೀರಿನ ಸೌಲಭ್ಯ ಒದಗಿಸಿದ್ದೇವೆ. ಸೋಮಶೇಖರರೆಡ್ಡಿ ಒಬ್ಬ ಕೆಲಸಗಾರ, ಆಗುವ ಕೆಲಸ ಆಗುತ್ತೆ ಎಂದು, ಆಗದ ಕೆಲಸ ಆಗಲ್ಲ ಎಂದು ನೇರವಾಗಿ ಹೇಳುವ ವ್ಯಕ್ತಿ ಎಂದು ಜನ–ರಿಗೆ ಗೊತ್ತು ಎಂದ ಅವರು, 2013ರಲ್ಲಿ ನಾನು ಯಾಕೆ ಸ್ಪರ್ಧೆ ಮಾಡಲಿಲ್ಲ ಎಂಬುದನ್ನು ಈಗ ಪುನರುಚ್ಛರಿಸಲಾರೆ. 2013ರಲ್ಲಿ ಸ್ಪರ್ಧೆ ಮಾಡದೇ ಮಾಜಿ ಶಾಸಕನಾದರೂ ಜನರ ನಡುವೆ ಇದ್ದೆ. ಆನರು ನನಗೆ ಶಾಸಕ ಎಂದೇ ಕರೆಯುತ್ತಿದ್ದರೆಂದು ಹಳೆಯ ದಿನಗಳನ್ನು ನೆನೆದರು.

## ಬಿಜೆಪಿ ತೊರೆದು ಕೆಆರ್‌ಪಿ ಪಕ್ಷಕ್ಕೆ ಸೇರ್ಪಡೆ

ಬಳ್ಳಾರಿ: ಬಳ್ಳಾರಿ ನಗರದ ಪಕ್ಷದ ಕಚೇರಿಯಲ್ಲಿ ಕಪ್ಪಗಲ್ ರೋಡ್ ವಾರ್ಡ್ ನ.21 ಜಿ.ಪ್ರಕಾಶ್ ರೆಡ್ಡಿ ಅವರ ನೇತೃತ್ವದಲ್ಲಿ, 17 ನೇ ವಾರ್ಡಿನ ಜನತಾನಗರ ಭಾಗದ ಜಿ.ಶಿವಾರೆಡ್ಡಿಯವರ ನೇತೃತ್ವದಲ್ಲಿ, 36ನೇ ವಾರ್ಡಿನ ಅವಂಭಾವಿಯ ಶ್ರೀನಿವಾಸ್ ರೆಡ್ಡಿ ಇವರ ನೇತೃತ್ವದಲ್ಲಿ, 4ನೇ ವಾರ್ಡಿನ ಪರ್ವಿನ್ ಬಾನು ನೇತೃತ್ವದಲ್ಲಿ, ಆನಂದ, ಗೋಪಾಲ್, ರವಿ, ರಾಜೇಶ್, ಪ್ರಶಾಂತ್, ಸುರೇಶ್ ದುರುಗೇಶ್ ಪಾಪಣ್ಣ, ದಾನಯ್ಯ,



ಶೇಖರ, ಶ್ರೀನಿವಾಸ್, ಜಯರಾಮ, ಮಹೇಶ, ರಾಮು, ಮೋಹನ್, ರಮೇಶ್, ಸೂರಿ, ಪ್ರಕಾಶ ಸೇರಿದಂತೆ ಸುಮಾರು 30 ವರ್ಷಗಳಿಂದ ಕಾಂಗ್ರೆಸ್, ಬಿಜೆಪಿ ಪಕ್ಷದಲ್ಲಿದ್ದ ಅನೇಕ ಕಾರ್ಯಕರ್ತರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷಕ್ಕೆ ಸೇರ್ಪಡೆಗೊಂಡರು.ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ತಿಮ್ಮಪ್ಪ, ಬಿ.ಪ್ರಕಾಶ್‌ರೆಡ್ಡಿ, ಮಹಿಳಾ ಶಕ್ತಿ ಘಟಕ ಅಧ್ಯಕ್ಷರಾದ ಹಂಪಿರಮಣ, ಸಾಮಾಜಿ–ಕ ಜಾಲತಾಣದ ಅಧ್ಯಕ್ಷರಾದ ಮಲ್ಲಿಕಾರ್ಜುನ ಆಚಾರ್, ಪ್ರಧಾನ ಕಾರ್ಯದರ್ಶಿಯಾದ ಶ್ರೀ ಶ್ರೀನಿವಾಸ್ ಹಿರಿಯ ಮುಖಂಡರಾದ ಶ್ರೀನಿವಾಸ ರೆಡ್ಡಿ, ಪಿಡಿ ಹಳ್ಳಿ ಶಿವಾರೆಡ್ಡಿ, ಎಸ್ ಸಿ ಘಟಕದ ಅಧ್ಯಕ್ಷರಾದ ಸಿಂಗರ್ ರಾಜು, ರಾಮು, ವಾಸು ಸೇರಿದಂತೆ ಪದಾಧಿಕಾರಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

## ಜನಸಾಗರದೊಂದಿಗೆ ಭರ್ಜರಿ ಮೆರವಣಿಗೆ ಮೂಲಕ ನಾಮಪತ್ರ ಸಲ್ಲಿಸಿದ ಬಿ.ನಾಗೇಂದ್ರ

ಬಳ್ಳಾರಿ: ಕಾಂಗ್ರೆಸ್ ಕಾರ್ಯಕರ್ತರ ಪಡೆ, ಹಿರಿಯ ನಾಯಕರ ಪಡೆ, ಕಿರಿಯರ ಪಡೆ ಮತ್ತು ಮತದಾರರನ್ನೊಳಗೊಂಡು ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಹುಮತದಿಂದ ಗೆಲ್ಲಿಸುವ ತೀರ್ಮಾನ ಮಾಡಿದ್ದಾರೆ. ಅದೇ ರೀತಿ ಬಳ್ಳಾರಿ ಜಿಲ್ಲೆಯ 5 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಗೆಲ್ಲಲಿದೆ ಎಂದು ಬಳ್ಳಾರಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ನಾಗೇಂದ್ರ ಹೇಳಿದರು.

ಬಳ್ಳಾರಿ ಜಿಲ್ಲಾಧಿಕಾರಿ ಕಚೇ–ರಿಯ ಚುನಾವಣಾಧಿಕಾ–ರಿಗೆ ನಾಮಪತ್ರ ಸಲ್ಲಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಐದೂ ಕ್ಷೇತ್ರಗಳಲ್ಲಿ ಕಾಂಗ್ರೆಸ್‌ನ ಬಿರುಗಾಳಿ ಭರ್ಜರಿಯಾಗಿದೆ. ಹೀಗಾಗಿ ಐದು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಭರ್ಜರಿ ಮತಗಳಿಂದ ಗೆಲುವು ಸಾಧಿಸಲಿದೆ.



ಮಂಗಳವಾರದಂದು ಬಳ್ಳಾರಿ ನಗರ ಕ್ಷೇತ್ರಕ್ಕೆ ನಾರಾ ಭರತ್ ರೆಡ್ಡಿ ಅವರು ನಾಮಪತ್ರ ಸಲ್ಲಿಸಿದ್ದಾರೆ. ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ನಾಯಕರೆಲ್ಲ ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಿಸಲು ತೀರ್ಮಾನಿಸಿದ್ದಾರೆ. ಪಕ್ಷ ಬಿಟ್ಟು ಹೋದವರು, ಬೇರೆ ಪಕ್ಷದಲ್ಲಿದ್ದವರೂ ಕೂಡ ಕಾಂಗ್ರೆಸ್ ಪಕ್ಷ ಸೇರಿದ್ದಾರೆ ಎಂದು ಹೇಳಿದರು.

ನಾಮಪತ್ರ ಸಲ್ಲಿಕೆಗೂ ಮೊದಲು ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕುನಿತಾಣಾ ಮಸೀದಿಯಿಂದೆ ಮೆರವಣಿಗೆ ಮೂಲಕ ಆಗಮಿಸಿದ ಬಿ.ನಾಗೇಂದ್ರ ಅವರು ಏಳುಮಕ್ಕಳ ತಾಯಮ್ಮ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಅಲ್ಲಿಂದ ಮತ್ತೆ ಚುನಾವಣಾಧಿಕಾರಿ ಕಚೇರಿವರೆಗೆ ದ್ವಿಚಕ್ರ ವಾಹನದ ಮೂಲಕ ಸಾಗಿದರು. ಕಾಂಗ್ರೆಸ್‌ನ ನಗರ ಅಭ್ಯರ್ಥಿ ನಾರಾ ಭರತ್ ರೆಡ್ಡಿಯವರು ಕೂಡಾ ಸಾಥ್ ನೀಡಿದರು. ರಾಜ್ಯಸಭಾ ಸದಸ್ಯ ಡಾ॥ಸಯ್ಯದ್ ನಾಸಿರ್ ಹುಸೇನ್, ಮಾಜಿ ಶಾಸಕ ನಾರಾ ಸೂರ್ಯನಾರಾಯಣ ರೆಡ್ಡಿ, ವಿ.ಎಸ್.ಉಗ್ರಪ್ಪ, ಬಳ್ಳಾರಿ ನಗರ ಅಭ್ಯರ್ಥಿ ನಾರಾಭರತ್ ರೆಡ್ಡಿ, ವಕ್ಫ್ ಬೋರ್ಡ್ ಅಧ್ಯಕ್ಷ ಹುಮಾಯೂನ್ ಖಾನ್, ಅಲ್ಲಂ ಪ್ರಶಾಂತ್, ಮಹಾನಗರ ಪಾಲಿಕೆಯ ಸದಸ್ಯರು, ಕಾಂಗ್ರೆಸ್ ವಿವಿಧ ಘಟಕಗಳ ಪದಾಧಿಕಾರಿಗಳು, ಕಾರ್ಯಕರ್ತರು ಹಾಜರಿದ್ದರು.

## ರಾಜ್ಯ ಸ್ವಾತಂತ್ರ್ಯ ಹಾಗೂ ಗೋವಾ ಸ್ವಾತಂತ್ರ್ಯ ಹೋರಾಟಗಾರರ ದಾಖಲಾತಿಗಳ ಸಲ್ಲಿಸಲು ಸೂಚನೆ

ಬೆಳಗಾವಿ: ರಾಜ್ಯ ಸ್ವಾತಂತ್ರ್ಯ ಯೋಧರ ಪಿಂಚಣಿ ಹಾಗೂ ಗೋವಾ ವಿಮೋಚನಾ ಚಳುವಳಿಯ ಪಿಂಚಣಿಯನ್ನು ಪಡೆಯುತ್ತಿರುವ ಅರ್ಹ ಫಲಾನುಭವಿಗಳು ತಮ್ಮ ವಿವರಗಳನ್ನು ಡಿಬಿಟಿ ತಂತ್ರಾಂಶದಲ್ಲಿ ಅಳವಡಿಸಬೇಕಾಗಿರುವ ಕಾರಣ ಪಿಂಚಣಿ ಪಡೆಯುತ್ತಿರುವ ಫಲಾನುಭವಿಗಳ ಆಧಾರ ಕಾರ್ಡ ಜೆರಾಕ್ಸ ಹಾಗೂ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ ಹಾಗೂ ಜೀವಿತ ಪ್ರಮಾಣ ಪತ್ರಗಳನ್ನು ಫಲಾನುಭವಿಗಳ ಜೊತೆಗಾರರು ಕೂಡಲೇ ಜಿಲ್ಲಾಧಿಕಾರಿಗಳ ಕಾರ್ಯಾಲಯದ ರೂ.ನಂ. 05 ರಲ್ಲಿ ಸಲ್ಲಿಸತಕ್ಕದ್ದು.

ದೂರದ ತಾಲ್ಲೂಕಿನವರು ತಮ್ಮ ತಾಲ್ಲೂಕು ಕಛೇರಿಯ ಸ್ವಾತಂತ್ರ್ಯ ಯೋಧರ ವಿಷಯ ನಿರ್ವಾಹಕರ ಹತ್ತಿರ ಏಪ್ರಿಲ್.25 2023 ರೊಳಗಾಗಿ ಸಲ್ಲಿಸಬಹುದು.

ಈಗಾಗಲೇ ಈ ಕಾರ್ಯಾಲಯಕ್ಕೆ ಅಥವಾ ಸಂಬಂಧಿಸಿದ ತಹಶೀಲ್ದಾರ ಕಛೇರಿಯಲ್ಲಿ ಸಲ್ಲಿಸಿದ್ದಲ್ಲಿ ಅಂತಹವರನ್ನು ಹೊರತುಪಡಿಸಿ ಉಳಿದವರು ಕೂಡಲೇ ಸಲ್ಲಿಸಬೇಕು.

ತಪ್ಪಿದ್ದಲ್ಲಿ ಏಪ್ರಿಲ್–2023 ನೇ ಮಾಹೆಯ ಪಿಂಚಣಿಯನ್ನು ತಮ್ಮ ಖಾತೆಗೆ ಜಮಾ ಮಾಡಲಾಗುವುದಿಲ್ಲ ಹಾಗೂ(ಪಿಂಚಣಿದಾರರನ್ನು ಕರೆತರಬಾರದು ಅವರ ಜೊತೆಗಾರರು ಮಾತ್ರ ದಾಖಲೆಗಳನ್ನು ಈ ಕಾರ್ಯಾಲಯಕ್ಕೆ ತಂದು ಸಲ್ಲಿಸತಕ್ಕದ್ದು) ಎಂದು ಅಪರ ಜಿಲ್ಲಾಧಿಕಾರಿ ತಿಳಿಸಿದರು.

## ಮಾತೃಭಾಷೆಯೇ ಪರೀಕ್ಷೆ: ಯುಜಿಸಿ ಸೂಚನೆ

ನವದೆಹಲಿ: ಕೋರ್ಸ್‌ಗಳ ಬೋಧನೆ ಇಂಗ್ಲಿಷ್‌ನಲ್ಲಿದ್ದರೂ ಕೂಡ, ಮಾತೃಭಾಷೆ/ಸ್ಥಳೀಯ ಭಾಷೆಗಳಲ್ಲಿಯೇ ಪರೀಕ್ಷೆ ಬರೆಯಲು ವಿದ್ಯಾರ್ಥಿಗಳಿಗೆ ಅನುಮತಿ ನೀಡಬೇಕು ಎಂದು ವಿಶ್ವವಿದ್ಯಾಲಯ ಅನುದಾನ ಆಯೋಗವು (ಯುಜಿಸಿ) ಎಲ್ಲ ವಿಶ್ವವಿದ್ಯಾಲಯಗಳಿಗೆ ಸೂಚಿಸಿದೆ.


ಮಾತೃಭಾಷೆ/ಸ್ಥಳೀಯ ಭಾಷೆಗಳಲ್ಲಿ ಕಲಿಕೆ ಪ್ರಕ್ರಿಯೆ ನಡೆಯಲು, ಪಠ್ಯಪುಸ್ತಕಗಳ ರಚನೆಯಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳು ಮಹತ್ವದ ಪಾತ್ರ ವಹಿಸುತ್ತವೆ' ಎಂದು ಯುಜಿಸಿ ಮುಖ್ಯಸ್ಥ ಜಗದೀಶ ಕುಮಾರ್ ಹೇಳಿದ್ದಾರೆ.

ಅವರ ಹೇಳಿಕೆಯನ್ನು ಉಲ್ಲೇಖಿಸಿ, ಯುಜಿಸಿ ಹೇಳಿಕೆಯೊಂದನ್ನು ಬಿಡುಗಡೆ ಮಾಡಿದೆ.

'ಮಾತೃಭಾಷೆ/ಸ್ಥಳೀಯ ಭಾಷೆಗಳಲ್ಲಿ ಪಠ್ಯಪುಸ್ತಕಗಳನ್ನು ರಚಿಸುವ ಪ್ರಯತ್ನಗಳಿಗೆ ಬಲ ತುಂಬುವುದು ಅಗತ್ಯ. ಇತರ ಭಾಷೆಗಳಲ್ಲಿರುವ ಉತ್ತಮ ಗುಣಮಟ್ಟದ ಪಠ್ಯಪುಸ್ತಕಗಳ ಅನುವಾದಕ್ಕೆ ಯುಜಿಸಿ ಪ್ರೋತ್ಸಾಹ ನೀಡುತ್ತದೆ' ಎಂದು ಪ್ರಕಟಣೆಯಲ್ಲಿ ವಿವರಿಸಲಾಗಿದೆ.

# ಎಂ.ಬಿ.ಪಾಟೀಲರಿಗೆ 50 ಸಾವಿರ ರೂಪಾಯಿ ಕಾಣಿಕೆ ನೀಡಿದ ರೈತ

ಕೆ.ಪಿ.ಸಿ.ಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂ. ಬಿ. ಪಾಟೀಲ ಅವರು ಮಾಡಿರುವ ನೀರಾವರಿ ಕೆಲಸಗಳಿಂದ ಸಂತಸನಾದ ರೈತರೊಬ್ಬರು ಎಂ. ಬಿ. ಪಾಟೀಲರ ಚುನಾವಣೆ ಖರ್ಚಿಗೆ ಕಾಣಿಕೆಯಾಗಿ ರೂ.50 ಸಾವಿರ ಚೆಕ್ಕನ್ನು ನೀಡಿ ಅಭಿಮಾನ ತೋ–ರಿದ ಘಟನೆ ವಿಜಯಪುರದಲ್ಲಿ ನಡೆದಿದೆ. ಬೆಳಿಗ್ಗೆ ಎಂ.ಬಿ.ಪಾಟೀಲರ ನಿವಾಸಕ್ಕೆ ರೈತ ಸ್ನೇಹಿತರೊಂದಿಗೆ ಆಗಮಿಸಿದ ಬಬಲೇಶ್ವರ ತಾಲೂಕಿನ ಸಂಗಾಪುರ ಎಸ್.ಎಚ್.



ಗ್ರಾಮದ ರೈತ ಶೇಖಪ್ಪ ಚಿಕ್ಕಗಲಗಲಿ ಚೆಕ್ ನೀಡಿ ಸಂಭ್ರಮಿಸಿದರು. ಬಳಿಕ ಮಾತನಾಡಿದ ಶೇಖಪ್ಪ ಚಿಕ್ಕಗಲಗಲಿ, ನಮ್ಮ ಭಾಗದಲ್ಲಿ ಈ ಮುಂಚೆ ಕುಡಿಯುವ ನೀರಿಗೆ ಹಾಹಾಕಾರವಿತ್ತು. ಕೆರೆಗಳಿಗೂ ನೀರು ಸಿಗುತ್ತಿರಲಿಲ್ಲ. ಎಂ. ಬಿ. ಪಾಟೀಲರು ಜಲಸಂಪನ್ಮೂಲ ಸಚಿವರಾದ ನಂತರ ನಮ್ಮ ಭಾಗದಲ್ಲಿ ಸಂಪೂರ್ಣ ನೀರಾವರಿ ಮಾಡಿ ಎಲ್ಲವನ್ನು ಸಮೃದ್ಧಿ ಮಾಡಿದ್ದಾರೆ. ಈ ಮುಂಚೆ ಪ್ರತಿ ಎಕರೆ ಭೂಮಿಯ ಬೆಲೆ ರೂ.10 ಸಾವಿರ ಮಾತ್ರ ಇತ್ತು. ಈಗ ಪ್ರತಿ ಎಕರೆಗೆ ಕನಿಷ್ಠ ರೂ.50 ಸಾವಿರರಂತೆ ಬೆಳೆ ಬೆಳೆಯುತ್ತಿದ್ದೇವೆ.

ಎಲ್ಲ ಗ್ರಾಮಗಳು ಶ್ರೀಮಂತವಾಗಿವೆ. ಆರ್ಥಿಕವಾಗಿ ಅಭಿವೃದ್ಧಿಯಾಗಿವೆ. ಪ್ರತಿಯೊಂದು ಊರುಗಳ ಚಿತ್ರಣ ಬದಲಾಗಿದೆ. ಜನರ ಆರ್ಥಿಕ ಪರಿಸ್ಥಿತಿ ಸುಧಾರಿಸಿದೆ. ಹಲವರು ಕಾರುಗಳನ್ನು ಖರೀದಿಸಿದ್ದಾರೆ. ನಾವು ಕಳೆದ 30 ರಿಂದ 40 ವರ್ಷಗಳ ಕಾಲ ರಾಜಕಾರಣಿಗಳ ಜೊತೆ ಸಂಪರ್ಕ ಹೊಂದಿದ್ದರೂ ಅವರು ಅಭಿವೃದ್ಧಿ ಮಾಡಿರಲಿಲ್ಲ. ಎಂ. ಬಿ. ಪಾಟೀಲರು ಕ್ರಾಂತಿ–ಕಾರಿ ಬದಲಾವಣೆ ಮಾಡಿದಾರೆ. ಇಂಥ ವ್ಯಕ್ತಿಗಳನ್ನು ತಾವೆಲ್ಲರೂ ಬೆಂಬಲಿಸಬೇಕು. ಅವರೊಂದಿಗೆ ಕೈಜೋಡಿಸಬೇಕು. ಎಂ. ಬಿ. ಪಾಟೀಲರು ಮುಂದಿನ ದಿನಗಳಲ್ಲಿ ಉನ್ನತ ಸ್ಥಾನಕ್ಕೆ ಏರಬೇಕು. ಇದಕ್ಕಿಂತಲೂ ಉನ್ನತ ಅಧಿಕಾರ ಪಡೆಯಬೇಕು.ಈ ಮೂಲಕ ಈ ಭಾಗದಲ್ಲಿ ಮತ್ತಷ್ಟು ಅಭಿವೃದ್ಧಿಯಾಗಬೇಕು ಎಂಬ ಸದುದ್ದೇಶದಿಂದ ವಿಜಯಪುರಕ್ಕೆ ಬಂದು ಚುನಾವಣೆ ಖರ್ಚಿಗೆ ರೂ.50 ಸಾವಿರ ಹಣದ ಚೆಕ್ ನೀಡಿದ್ದೇನೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ದುಂಡಪ್ಪ ಬಡ್ರಿ, ರಮೇಶ ಬಡ್ರಿ, ರಾಜು ಬಡ್ರಿ, ರಮೇಶ ಬರಗಿ ಮತ್ತು ನಂದೆಪ್ಪ ಬಡ್ರಿ ಉಪಸ್ಥಿತರಿದ್ದರು.ಈ ಮುಂಚೆ ಸಂಗಾಪುರ ಎಸ್.ಎಚ್ ಗ್ರಾಮಸ್ಥರು ತಮ್ಮೂರಿನಲ್ಲಿ ಎಂ. ಬಿ. ಪಾಟೀಲರ ಪ್ರತಿಮೆ ಸ್ಥಾಪಿಸಲು ನಿರ್ಧರಿಸಿದಾಗ ಇದೇ ರೈತ ಶೇಖಪ್ಪ ಚಿಕ್ಕಗಲಗಲಿ ಗ್ರಾಮದ ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ಒಂದೂವರೆ ಗುಂಟೆ ಜಮೀನನ್ನು ದಾನವಾಗಿ ನೀಡುವ ಮೂಲಕ ಗಮನ ಸೆಳೆದಿದ್ದರು. ಈಗ ಎಂ. ಬಿ. ಪಾಟೀಲರಿಗೆ ಚುನಾವಣೆ ಖರ್ಚಿಗೆ ರೂ. 50 ಸಾವಿರ ಕಾಣಿಕೆ ನೀಡುವ ಮೂಲಕ ಮತ್ತೊಮ್ಮೆ ಅಭಿಮಾನ ಮೆರೆದಿದ್ದಾರೆ.

# ಚಿಕ್ಕೋಡಿ: ಮತ ಜಾಗೃತಿ ಬೈಕ್ ಜಾಥಾ



ಚಿಕ್ಕೋಡಿ : ಬಸವೇಶ್ವರ ವೃತ್ತದಲ್ಲಿ ಮತ ಜಾಗೃತಿ ಬೈಕ್ ಜಾಥಾ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ ಬೆಳಗಾವಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಚಿಕ್ಕೋಡಿ ಇವರು ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಚಿಕ್ಕೋಡಿ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಾಯಿತು

ಜಿಲ್ಲಾ ಪಂಚಾಯತ ಬೆಳಗಾವಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಚಿಕ್ಕೋಡಿ ವತಿಯಿಂದ ಬುಧವಾರ ಏಪ್ರೀಲ್ 19 ರಂದು ಆಯೋಜಿಸಿದ್ದ ಮತ ಜಾಗೃತಿ, ಬೈಕ್ ಜಾಥಾ, ಬಸವೇಶ್ವರ ವೃತ್ತದಿಂದ ,ಜಿಂಗಲ್ಸ (ಧ್ವನಿವರ್ಧಕ) ಗಳ ಮೂಲಕ ಕಡಿಮೆ ಮತದಾನವಾಗಿರುವ ಸ್ಥಳಗಳಲ್ಲಿ ಸಂಚರಿಸುತ್ತ ಮತದಾನದ ಕು–ರಿತು ಘೋಷಣೆಗಳನ್ನು ಕೂಗುತ್ತ ಪ್ರಚಾರ ಹಾಗೂ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಎಮ ಎ ಪೋತದಾರ ಸಹಾಯಕ ಇಂಜಿನಿಯರ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಚಿಕ್ಕೋಡಿ, ದೀಪಕ.ಕೆ. ಜಿಲ್ಲಾ ಯೋಜನಾ ವ್ಯವಸ್ಥಾಪಕರು ಜಿಲ್ಲಾ ಪಂಚಾಯತ್ ಬೆಳಗಾವಿ ಸೇ–ರಿಂದತೆ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಆರೋಗ್ಯ ಕಾಳಜಿ ವಹಿಸುವುದರ ಜತೆಗೆ ತಪ್ಪದೇ ಮತದಾನ ಮಾಡಬೇಕು: ತಾಪಂ ಇಓ ಸುಭಾಷ ಸಂಪಗಾವಿ

ಬೆಳಗಾವಿ: ಪ್ರತಿಯೊಬ್ಬರ ನೆಮ್ಮದಿಯ ಬದುಕಿಗೆ ಆರೋಗ್ಯ ಎಷ್ಟು ಮುಖ್ಯವೋ ಅಷ್ಟೇ ಮುಖ್ಯವಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸದೃಢ ರಾಷ್ಟ್ರ ಹಾಗೂ ಸಮರ್ಥ ಸರ್ಕಾರ ರಚನೆಯಲ್ಲಿ ಮತದಾನ ಅತ್ಯಂತ ಮಹತ್ವದ ಪಾತ್ರ ವಹಿಸುತ್ತದೆ. ಪ್ರತಿಯೊಬ್ಬರೂ ಆರೋಗ್ಯ ಕಾಳಜಿ ವಹಿಸುವುದರ ಜತೆಗೆ ತಪ್ಪದೇ ಮತದಾನ ಮಾಡಬೇಕು' ಎಂದು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ, ತಾಪಂ ಇಓ ಸುಭಾಷ ಸಂಪಗಾವಿ ಹೇಳಿದರು.

ಚನ್ನಮ್ಮ ಕಿತ್ತೂರು ತಾಲೂಕಿನ ಕಲಭಾಂವಿ ಗ್ರಾಪಂ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯಡಿ ಕೈಗೊಂಡ ಕಾಮಗಾರಿ ಸ್ಥಳದಲ್ಲಿ ಮಂಗಳವಾರ ಏ.18 ಐಇಸಿ ಚಟುವಟಿಕೆಯಡಿ ಆರೋಗ್ಯ ಶಿಬಿರ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಕೂಲಿಕಾರಿಗೆ ಉಚಿತ ಆರೋಗ್ಯ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಇಂದಿನ ಒತ್ತಡದ ಬದುಕಿನಲ್ಲಿ ಗಳಿಕೆ ಎನ್ನುವುದು ಹಣ ಮಾತ್ರವಲ್ಲ, ಸದೃಢ ಆರೋಗ್ಯವನ್ನು ಕಾಪಾಡಿಕೊಳ್ಳುವುದೇ ನಿಜವಾದ ಸಂಪಾದನೆ ಎಂಬಂತಾಗಿದ್ದು ದುಡಿಮೆಯ ಜತೆಗೆ ಆರೋಗ್ಯಕ್ಕೂ ಗಮನಹ–ರಿಸಬೇಕು. ದಿನವಿಡಿ ಪರಿಶ್ರಮ ಪಡುವ




ಕೂಲಿಕಾರು ಆರೋಗ್ಯಯುತವಾಗಿರಲು ತಪ್ಪದೇ ಪೌಷ್ಟಿಕಾಂಶಯುಕ್ತ ಆಹಾರ ಸೇವನೆ ಮಾಡಬೇಕು. ಅದೇ ರೀತಿ ಮತದಾನ ಪ್ರತಿಯೊಬ್ಬರು ಹಕ್ಕಾಗಿದ್ದು, ಅದನ್ನು ಹಣ–ಕಾಸಿನ ಆಮಿಷಕ್ಕೆ ಒಳಗಾಗದೇ, ಸಂವಿಧಾನ ನೀಡಿದ ಹಕ್ಕನ್ನು ಮಾರಿಕೊಳ್ಳದೇ ವಿವೇಚನೆಯಿಂದ ಮತದಾನ ಮಾಡಬೇಕು' ಎಂದು ಮನೋಜ್ಞವಾಗಿ ತಿಳಿಸಿದರು.

ಸಂಗೊಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಸಂತೋಷ ಗಡದವರ ಮಾತನಾಡಿ, 'ಸೇವಿಸುವ ಆಹಾರ ಹಿತಮಿತವಾಗಿ, ಕಾಲಕ್ಕೆ ಅನುಗುಣವಾಗಿದ್ದರೆ ಆಹಾರ ಪದ್ಧತಿ ಮೂಲಕವೇ ನಮ್ಮ ಆರೋಗ್ಯ ರಕ್ಷಣೆ ಮಾಡಿಕೊಳ್ಳಬಹುದು. ಅಲ್ಲದೇ, ಸರ್ಕಾರ ವಿವಿಧ ಯೋಜನೆಗಳಡಿ ಆಯೋಜಿಸುವ ಆರೋಗ್ಯ ಶಿಬಿರಗಳು ಹಾಗೂ ಆರೋಗ್ಯ ಇಲಾಖೆಯ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು' ಎಂದು ಕೂಲಿಕಾರರಿಗೆ ಮಾಹಿತಿ ನೀಡಿದರು.

ತಾಪಂ ಸಹಾಯಕ ನಿರ್ದೇಶಕರಾದ ಲಿಂಗರಾಜ ಹಲಕರ್ಣಿಮಠ, ಐಇಸಿ ಸಂಯೋಜಕಿ ಎಸ್.ಬಿ.ಜವಳಿ, ಗ್ರಾಪಂ ಕಾರ್ಯದರ್ಶಿ ರುದ್ರಪ್ಪ ಜಾಂಗಟಿ, ಮಡಿವಾಳಪ್ಪ ತಿಗಡಿ, ಪ್ರವೀಣ ಸೋಮನಟ್ಟಿ, ಮೇಘರಾಜ ಸೋಮನಟ್ಟಿ, ಕಲ್ಲಪ್ಪ ಚಕಡಿ, ರೇಣುಕಾ ತಳಾವರ, ಅನ್ನಪೂರ್ಣ ವಕ್ಕುಂದ, ಭಾಗ್ಯಲಕ್ಷ್ಮೀ ಬಿ ಎಚ್, ಮಹಾದೇವಿ ದಾಸ್ತಿಕೊಪ್ಪ, ಸಿದ್ದಾರೂಢ ತಿಗಡಿ, ವಿಠ್ಠಲ ತಳವಾರ, ದೇಮಪ್ಪ ಹೈಬತ್ತಿ ,ಸಂಗೊಳ್ಳಿ ಆರೋಗ್ಯ ಕೇಂದ್ರ ಹಾಗೂ ಕಿತ್ತೂರ ಸಮುದಾಯ ಆರೋಗ್ಯ ಕೇಂದ್ರದ ಹಾಗೂ ಗ್ರಾಪಂ ಸಿಬ್ಬಂದಿ ಪಾಲ್ಗೊಂಡಿದ್ದರು.

# ತುಮಕೂರು; ಅಕ್ರಮವಾಗಿ ಸಾಗಿಸುತ್ತಿದ್ದ 2.62ಲಕ್ಷ ರೂ. ಜಪ್ತಿ



ತುಮಕೂರು: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ–2023ರ ಸಂಬಂಧ ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಚೆಕ್ಪೋಸ್ಟ್'ಗಳನ್ನು ನಿರ್ಮಿಸಲಾಗಿದ್ದು, ಎಫ್. ಎಸ್.ಟಿ. ಮತ್ತು ಎಸ್ಎಸ್ಟಿ ತಂಡಗಳು ಕಾರ್ಯ ನಿರ್ವಹಿಸುತ್ತಿರುತ್ತವೆ.

ಏಪ್ರಿಲ್ 17ರಂದು ರಾತ್ರಿ 8–15ರ ಸಮಯದಲ್ಲಿ ತುಮಕೂರಿನ ಜಾಸ್ ಟೋಲ್ ಹತ್ತಿರ ಚುನಾವಣಾ ಚೆಕ್ಪೋಸ್ಟ್'ನಲ್ಲಿ ಕೆಎ–34–ಎನ್–9504 ಕಾರಿನಲ್ಲಿ ಬಂದ ಸುಧೀರ್ ಎಂಬುವವರ ವಾಹನವನ್ನು ತಪಾಸಣೆ ನಡೆಸಿದಾಗ 2,62,000 ರೂ.ಗಳಿದ್ದು, ಈ ಕುರಿತು ಸಮಂಜಸವಾದ ಉತ್ತರ ನೀಡದೇ ಇರುವುದರಿಂದ ಎಸ್.ಎಸ್.ಟಿ. ತಂಡದ ಮುಖ್ಯಸ್ಥ ಸಿ.ಆರ್ ರಾಘವೇಂದ್ರ ಅವರು ಸದರಿಯವರನ್ನು ಹಾಗೂ ಹಣವನ್ನು ವಶಕ್ಕೆ ಪಡೆದಿರುತ್ತಾರೆ ಹಾಗೂ ಮುಂದಿನ ಕ್ರಮಕ್ಕಾಗಿ ಕ್ಯಾತ್ಸಂದ್ರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ವಿದ್ಯಾಕುಮಾರಿ ತಿಳಿಸಿದ್ದಾರೆ.

# ಬಿಜಿಎಸ್ ಗ್ಲೆನಿಗಲ್ಸ್ ಗ್ಲೋಬಲ್ ಪರಿಣಿತರಿಂದ ಯಕೃತ್ತು ಮತ್ತು ಮೂತ್ರಪಿಂಡ ಕಸಿ ಶಸ್ತ್ರ ಚಿಕಿತ್ಸೆ ಯಶಸ್ವಿ

ಹುಬ್ಬಳ್ಳಿ: ಅಪರೂಪದ ಅನುವಂಶಿಕ ಪಾಲಿಸಿಸ್ಟಿಕ್ ಯಕೃತ್ ಮತ್ತು ಮೂತ್ರಪಿಂಡ ಕಾಯಿಲೆಯಿಂದ ಬಳಲುತ್ತಿದ್ದ ದೆಹಲಿಯ 42 ವರ್ಷ ವಯಸ್ಸಿನ ಮಹಿಳೆಗೆ ಬಿಜಿಎಸ್ ಗ್ಲೆನಿಗಲ್ಸ್ ಗ್ಲೋಬಲ್ ಆಸ್ಪತ್ರೆಯ ಪರಿಣಿತ ವೈದ್ಯರ ತಂಡ ಯಕೃತ್ತು ಮತ್ತು ಮೂತ್ರಪಿಂಡದ ಕಸಿ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಿದೆ.

ಅನುವಂಶಿಕ ಅಸ್ವಸ್ಥತೆಯಿಂದ ಯಕೃತ್ ಮತ್ತು ಮೂತ್ರಪಿಂಡ ಬಾಧಿತವಾಗಿದ್ದವು. ಇದರಿಂದ ಅಂಗಗಳು ಅಸಮಾನ್ಯ ಕ್ರಿಯೆಗೆ ಕಾರಣವಾಗಿದ್ದು, ಜೀವ ಉಳಿಸುವ ವಿಧಾನದೊಂದಿಗೆ ಎರಡೂ ಅಂಗಗಳ ಕಸಿ ಮಾಡಬೇಕಾದ ಅಪಾಯಕಾರಿ ಪರಿಸ್ಥಿತಿ ನಿರ್ಮಾಣವಾಗಿತ್ತು. ರೋಗಿಯ ಪರಿಸ್ಥಿತಿ ಮತ್ತು ವೈದ್ಯಕೀಯ ದಾಖಲೆಗಳನ್ನು ಆಸ್ಪತ್ರೆಯ



ಯಕೃತ್ ಮತ್ತು ಮೂತ್ರಪಿಂಡ ಕಸಿ ಶಸ್ತ್ರ ಚಿಕಿತ್ಸಾ ತಂಡಗಳು ಪರಿಶೀಲಿಸಿದವು.

ಕಸಿ ತಜ್ಞ, ಹಿರಿಯ ಸಮಾಲೋಚಕ ಮತ್ತು ಈ ವಿಭಾಗದ ಮುಖ್ಯಸ್ಥ ಡಾ. ಮಹೇಶ್ ಗೋಪಶೆಟ್ಟಿ ಮತ್ತು ಶಸ್ತ್ರ ಚಿಕಿತ್ಸಕರು, ಹಿರಿಯ ಸಮಾಲೋಚಕರಾದ ಡಾ. ಪ್ರದೀಪ್ ಕೃಷ್ಣ, ಡಾ. ರವೀಂದ್ರ ನಿಡೋಣಿ, ಡಾ. ಡಿ.ಎ. ಪ್ರಮೋದ್ ಕುಮಾರ್, ಯಕೃತ್ ಕಸಿ ತಜ್ಞ ಡಾ. ಬಿ.ಟಿ. ಅನಿಲ್ ಕುಮಾರ್, ಮೂತ್ರರೋಗ ಶಾಸ್ತ್ರ ವಿಭಾಗದ ಹಿರಿಯ ಸಮಾಲೋಚಕ, ಕಸಿ ವೈದ್ಯ ಡಾ. ಎಸ್. ನರೇಂದ್ರ ನೇತೃತ್ವದ ತಂಡ ಎರಡೂ ಅಂಗಗಳ ಕಸಿ ಶಸ್ತ್ರ ಚಿಕಿತ್ಸೆ ಏಕಕಾಲಕ್ಕೆ ಮಾಡುವ ಕುರಿತು ರೋಗಿಗೆ ಮನವರಿಕೆ ಮಾಡಿಕೊಟ್ಟಿತು.

ಒಂದು ಅಂಗ ತೆಗೆದು ಕಸಿ ಮಾಡಿದರೆ ಉಪಯೋಗವಿಲ್ಲ, ಎರಡೂ ಅಂಗಗಳನ್ನು ತೆರವುಗೊಳಿಸಿ ಕಸಿ ಶಸ್ತ್ರ ಚಿಕಿತ್ಸೆ ನಡೆಸಿದರೆ ಆಗುವ ಲಾಭದ ಬಗ್ಗೆ ತಿಳಿವಳಿಕೆ ನೀಡಿತು.

ನಂತರ ಆಕೆಯನ್ನು ಮೃತ ವ್ಯಕ್ತಿಯ ಯಕೃತ್ತು ಮತ್ತು ಮೂತ್ರಪಿಂಡ ಕಸಿಗಾಗಿ ಹೆಸರು ನೋಂದಾಯಿಸಲಾಗಿದ್ದು, ನಂತರ ಮೈಸೂರಿನ ವ್ಯಕ್ತಿಯೊಬ್ಬರಿಂದ ಎರಡೂ ಅಂಗಗಳು ದೊರೆತವು. ಹಲವಾರು ವರ್ಷಗಳಿಂದ ಯಶಸ್ವಿಯಾಗಿ ಕಸಿ ಶಸ್ತ್ರ ಚಿಕಿತ್ಸೆ ನಡೆಸುತ್ತಿರುವ ತಜ್ಞ ವೈದ್ಯರ ತಂಡ ಯಕೃತ್ ಮತ್ತು ಮೂತ್ರಪಿಂಡದ ಕಸಿ ಶಸ್ತ್ರ ಚಿಕಿತ್ಸೆ ನಡೆಸಿತು. ಆಕೆ ಚಿಕಿತ್ಸೆಗೆ ಸ್ಥಿರವಾಗಿ ಸ್ಪಂದಿಸಿದಳು.

ಬಿಜಿಎಸ್ ಗ್ಲೆನಿಗಲ್ಸ್ ಗ್ಲೋಬಲ್ ಆಸ್ಪತ್ರೆ ಸಂಕೀರ್ಣದಾಯಕ ಶಸ್ತ್ರ ಚಿಕಿತ್ಸೆಗಳನ್ನು ಸಮರ್ಥ–'ವಾಗಿ ನಡೆಸಿ, ಸವಾಲುಗಳನ್ನು ಎದುರಿಸಿ ಜೀವ ಉಳಿಸುವಲ್ಲಿ ಸಫಲವಾಗಿದೆ ಎಂದು ಕಸಿ ತಜ್ಞ, ಹಿರಿಯ ಸಮಾಲೋಚಕ ಮತ್ತು ಈ ವಿಭಾಗದ ಮುಖ್ಯಸ್ಥ ಡಾ. ಮಹೇಶ್ ಎಸ್. ಗೋಪಶೆಟ್ಟಿ ಸಂತಸ ವ್ಯಕ್ತಪಡಿಸಿದ್ದಾರೆ.

# ಪೀಠತ್ಯಾಗ ಮಾಡಿ ನಾಮಪತ್ರ ಸಲ್ಲಿಸಿದ ಶಿವಶಂಕರ ಸ್ವಾಮೀಜಿ

ರಬಕವಿ: ತೇರದಾಳ ಮತಕ್ಷೇತ್ರದ ಪಕ್ಷೇತರ ಅಭ್ಯರ್ಥಿಯಾಗಿ ಹಾಗೂ ನೇಕಾರ ಪ್ರತಿನಿಧಿಯಾಗಿ ಶಿವಶಂಕರ ಶಿವಾಚಾರ್ಯ ಮಹಾಸ್ವಾಮೀಜಿ ಬುಧವಾರ ಅಪಾರ ನೇಕಾರ ಬೆಂಬಲಿಗರೊಂದಿಗೆ ಆಗಮಿಸಿ ತಹಶೀಲ್ದಾರ ಕಾರ್ಯಾಲಯದಲ್ಲಿ ನಾಮಪತ್ರ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಜಗದ್ಗುರು ಶಿವಶಂಕರ ಶಿವಾಚಾರ್ಯ ಮಹಾಸ್ವಾಮಿಗಳು, ನಾನು ಕುರುಹಿನಶೆಟ್ಟಿ ಸಮಾಜದ ವೀರಭೀಕ್ಷಾವೃತಿ ಮಠ ಹಳೇ ಹುಬ್ಬಳ್ಳಿಯ ಪೀಠಕ್ಕೆ ರಾಜಿನಾಮೆ ಸಲ್ಲಿಸಿದ್ದೇನೆ ಎಂದರು.

ನಾನು ಚುನಾನಣೆಗೆ ನಿಲ್ಲುತ್ತಿರುವುದರಿಂದ ಭಕ್ತಾದಿಗಳಲ್ಲಿ ಆತಂಕವಾಗಬಾರದು, ಭಕ್ತಿಯ ಭಾವನೆ ಇರುವುದರಿಂದ ಕೆಟ್ಟ ಭಾವನೆ ತಿಳಿದುಕೊಳ್ಳಬಾರದು,




ಮಠದ ಸಾಮಾನ್ಯ ಭಕ್ತನಾಗಿ, ಒಬ್ಬ ಸದಸ್ಯನಾಗಿ ಇರುತ್ತೇನೆ. ಪೀಠ ತ್ಯಾಗ ಮಾಡುತ್ತಿದ್ದೇನೆ. ಈಗ ನಾನು ಪೀಠಾಧ್ಯಕ್ಷನಾಗಿ ಇಲ್ಲ ಎಂದು ಸ್ಪಷ್ಟಪಡಿಸಿದರು.

ಇಬ್ಬರು ರಾಷ್ಟ್ರೀಯ ಪಕ್ಷದ ಅಭ್ಯರ್ಥಿಗಳು ಹೊರಗಿನವರಾಗಿದ್ದಾರೆ. ನಾನು ಹೊರಗಿನವನೆ ಆದರೂ ನಾನು ಆರೆಳು ವರ್ಷಗಳಿಂದ ಇಲ್ಲಿಯೇ ಗುರುತಿಸಿಕೊಂಡಿದ್ದು, ನಾನು ಸ್ಥಳೀಯ ಎಂಬುದನ್ನು ಸಾಬೀತು ಮಾಡುತ್ತೇನೆ. ನನ್ನ ಮತದಾನ ವಿಜಯಪುರ ಜಿಲ್ಲೆಯ ನಾಗಠಾಣ ಕ್ಷೇತ್ರದಲ್ಲಿದೆ ಎಂದ ಅವರು, ಗೆದ್ದರೆ ತೇರದಾಳ ಮತಕ್ಷೇತ್ರದಲ್ಲಿ ಅಭಿವೃದ್ಧಿ ಮಾಡುತ್ತೇನೆ. ಸೋತರೆ ಹಿಮಾಲಯಕ್ಕೆ ಹೋಗುತ್ತೇನೆ ಎಂದರು.

ಈ ಸಂದರ್ಭದಲ್ಲಿ ರಾಜೇಂದ್ರ ಅಂಬಲಿ, ಪ್ರವೀಣ ಕೋಲಾರ ಸೇರಿದಂತೆ ಅನೇಕರು ಇದ್ದರು.

# ಸಿದ್ದರಾಮಯ್ಯರಂತೆ ಕಾನೂನು ಓದಿ ರಾಜಕೀಯಕ್ಕೆ ಬರುವೆ: ಧವನ್ ಹೇಳಿಕೆ

ಮೈಸೂರು: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೊಮ್ಮಗ ಧವನ್ ರಾಕೇಶ್ ಭವಿಷ್ಯದಲ್ಲಿ ರಾಜ–ಕೀಯಕ್ಕೆ ಬರುವ ಇಂಗಿತ ವ್ಯಕ್ತಪಡಿಸಿದ್ದಾರೆ.

ಕಾನೂನು ಓದಿದ ನಂತರ ನಾನು ರಾಜಕೀಯ ಪ್ರವೇಶ ಮಾಡುವುದಾಗಿ ಅವರು ತಿಳಿಸಿದ್ದಾರೆ. ತಂದೆ ರಾಕೇಶ್ ಅವರಿಗೆ ರಾಜಕೀಯ ಸೇರಲು ಆಸೆ ಇತ್ತು. ಆದರೆ ಅವರು ತೀ–ರಿಕೊಂಡರು. ತಂದೆ ರಾಕೇಶ್ ಅವರ ರಕ್ತವೇ ನನ್ನ ರಕ್ತ. ಹೀಗಾಗಿ ರಾಜಕೀಯ ಸೇರಿ ತಂದೆಯ ಕನಸು ನನಸು ಮಾಡುತ್ತೇನೆ ಎಂದು ತಿಳಿಸಿದ್ದಾರೆ.

ರಾಜಕೀಯದ ಬಗ್ಗೆ ತಾತ ಸಿದ್ದರಾಮಯ್ಯ ಅವರ ಬಳಿ ಕೇಳಿ ತಿಳಿದುಕೊಳ್ಳುತ್ತೇನೆ.



ನಮ್ಮ ತಾತ ಮತ್ತೊಮ್ಮೆ ಗೆದ್ದು ಮುಖ್ಯಮಂತ್ರಿ ಆಗಬೇಕು. ಕಳೆದ ಸಲ ಚಿಕ್ಕಪ್ಪ ಯತೀಂದ್ರ ಅವರು ವರುಣಾ ಮತಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದರು. ತಾತನ ಪರವಾಗಿ ನಾನು ಚುನಾವಣಾ ಪ್ರಚಾರ ಮಾಡುತ್ತೇನೆ. ಅವರನ್ನು ಗೆಲ್ಲಿಸಲು ಕ್ಷೇತ್ರದ ಜನತೆ ಜೊತೆ ಸೇರಿ ಕೆಲಸ ಮಾಡುವುದಾಗಿ ಧವನ್ ತಿಳಿಸಿದರು.

ನಮ್ಮ ಅಣ್ಣನಿಗೆ ಇದು ಕೊನೆಯ ಚುನಾವಣೆ. ಆಮೇಲೆ ಅವನ ಮಗ, ಮೊಮ್ಮಗ ಬೇರೆ ಯಾರಾದರೂ ನಿಲ್ಲುತ್ತಾರೆ. ಕೊನೆಯ ಚುನಾವಣೆಯಲ್ಲಿ ಗೆಲ್ಲುತ್ತಾನೆ ಕಳೆದ ಚುನಾವಣೆಯಲ್ಲಿ ನಿಂತು ವಿರೋಧ ಪಕ್ಷದ ನಾಯಕನಾಗಿದ್ದಾನೆ. ಈ ಸಲ ಆತ ಮುಖ್ಯಮಂತ್ರಿ ಆಗಬೇಕೆಂಬ ಜನರ ಬಯಕೆ. ಇದರ ಬಗ್ಗೆ ತೀರ್ಮಾನ ಮಾಡುತ್ತಾರೆ ಎಂದು ಸಿದ್ದರಾಮಯ್ಯ ಅವರ ಸಹೋದರ ಸಿದ್ದೇಗೌಡರು ಪ್ರತಿಕ್ರಿಯಿಸಿದರು.

# ಪ್ರಾಮಾಣಿಕವಾಗಿ ಮತಯಾಚನೆ ನಡೆಸುವುದೆ ನನ್ನ ಸಿದ್ಧಾಂತ



ಹುಳಿಯಾರು: ಚಿಕ್ಕನಾಯಕನಹಳ್ಳಿ ವಿಧಾನ ಸಭೆ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತಿದ್ದು ಯಾವುದೆ ಆಸೆ ಆಮಿಷ್ಯಗಳಿಗೆ ಅವಕಾಶ ನೀಡದೆ ಪ್ರಾಮಾಣಿಕವಾಗಿ ಚುನವಣೆಯ ಮತಯಾಚನೆ ನಡೆಸುವುದಾಗಿ ಪಕ್ಷೇತರ ಅಭ್ಯರ್ಥಿ ಮತ್ತು ಸಮಾಜ ಸೇವಕ ಹುಳಿಯಾರಿನ ನಾಸೀರ್ ಬೇಗ್ ತಿಳಿಸಿದರು.

ಚಿಕ್ಕನಾಯಕನಹಳ್ಳಿ ತಾಲೂಕು ಕಚೇರಿಯಲ್ಲಿ ಬುಧವಾರದಂದು ಪಕ್ಷೇತರ ಅಭ್ಯರ್ಥಿಯಾಗಿ ನಾಮ ಪತ್ರ ಸಲ್ಲಿಸಿದ ನಂತರ ಹುಳಿಯಾರು ಪಟ್ಟಣದಲ್ಲಿ ಚುನಾವಣೆಯ ಮತಯಾಚನೆ ನಡೆಸಿ ಮಾತನಾಡಿದರು.

ಈ ತಾಲೂಕಿನಲ್ಲಿ ಕಳೆದ ಐದುವರ್ಷದಿಂದ ಕೂಲಿಯಿಂದ ಜೀವನಸಾಗಿಸುವರು, ಸಣ್ಣಪುಟ್ಟ ಕೆಲಸಮಾಡಿಕೊಂಡು ಬದುಕುತ್ತಿರುವ ಜನಸಾಮಾನ್ಯರಿಗೆ ಆಸರೆಯಾಗ ಬೇಕು ನನ್ನ ಕೈಲಾದ ಸಹಾಯವನ್ನ ಮಾಡಬೇಕು ಎಂದು ನಿರ್ಧರಿಸಿ ಚಿಕ್ಕನಾಯಕನಹಳ್ಳಿ ವಿಧಾನ ಸಭೆ ಚುನಾವಣೆಗೆ ಸ್ಪರ್ಧಿಸುತ್ತಿದ್ದೇನೆ.

ಚುನಾವಣೆಯಲ್ಲಿ ಪ್ರಾಮಾಣಿಕವಾಗಿ ಜನರು ನನಗೆ ಹೆಚ್ಚು ಮತವನ್ನ ನೀಡಿ ಗೆಲ್ಲಿಸುತ್ತಾರೆಂಬ ವಿಶ್ವಾಸವಿದೆ ಎಂದರು. ಈ ಪ್ರಯತ್ನಕ್ಕೆ ನನ್ನ ಸೇಹಿತರು, ಬಂದು ಬಳಗದವರು ಕೈಜೋಡಿಸಿ ನನ್ನ ಜೋತೆಗಿದ್ದಾರೆಂದರು.



**ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ಶ್ರೀ ಚಾಮುಂಡೇಶ್ವರಿ ದೇವಾಲಯದಲ್ಲಿ ಸಿದ್ದರಾಮಯ್ಯ ಅವರು ಪೂಜೆ ಸಲ್ಲಿಸಿದ ಸಂದರ್ಭ.**

# ಎದುರಾಳಿಗಳಾದ ಬಾಲಚಂದ್ರ ಜಾರಕಿಹೊಳಿ, ಭೀಮಪ್ಪ ಗಡಾದ ಉಭಯ ಕುಶಲೋಪಚಾರಿ



ಮೂಡಲಗಿ: ಬಿಜೆಪಿ ಅಭ್ಯರ್ಥಿಯಾಗಿ ಉಮೇದುವಾರಿಕೆ ಸಲ್ಲಿಸಿದ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಹೊರಬರುತ್ತಿದ್ದಂತೆಯೇ ಪಕ್ಷೇತರ ಅಭ್ಯರ್ಥಿ ಭೀಮಪ್ಪ ಗಡಾದ ಅವರು ಪರಸ್ಪರ ಕುಶಲೋಪಚಾರಿ ವಿಚಾರಿಸಿದರು.

ಪರಸ್ಪರ ಎದುರಾಳಿಗಳಾದ ಬಾಲಚಂದ್ರ ಜಾರಕಿಹೊಳಿ ಹಾಗೂ ಭೀಮಪ್ಪ ಗಡಾದ ಅವರು ತಮ್ಮ ರಾಜಕೀಯ ಮರೆತು ಪರಸ್ಪರ ಕೈ ಮುಗಿಯುವ ಮೂಲಕ ಕುಶಲೋಪಚಾರಿ ವಿಚಾರಿಸಿದರು.

ನಗುಮುಖದಿಂದಲೇ ಬಾಲಚಂದ್ರ ಜಾರಕಿಹೊಳಿ ಅವ–ರಿಗೆ ಗಡಾದ ಎದುರಾದಾಗ ಆರಾಮರೀ.. ನಾವು ಆರಾಮರೀ.. ನಮಗೂ ಒಳ್ಳೆಯದಾಗಲಿ.. ನಿಮಗೂ ಒಳ್ಳೆಯದಾಗಲಿ.. ಎಲ್ಲರಿಗೂ ಒಳ್ಳೆಯದಾಗಲಿ ಎಂದು ಬಾಲಚಂದ್ರ ಜಾರಕಿಹೊಳಿ ಅವರು ಇದೇ ಸಂದರ್ಭದಲ್ಲಿ ಶುಭ ಹಾರೈಸಿದರು. ಈ ಅಪರೂಪದ ಘಟನೆಗೆ ಶಾಸಕರ ಕಾರ್ಯಕರ್ತರು ಸಾಕ್ಷಿಯಾದರು.

# ಕೋಟೂರು ಗ್ರಾಮದಲ್ಲಿ ಬಿಜೆಪಿ ಮುಖಂಡನ ಹತ್ಯೆ

## ಎಸ್‌ಡಿಎಂ ಆಸ್ಪತ್ರೆಗೆ ದೌಡಾಯಿಸಿದ ಕೇಂದ್ರ ಸಚಿವ ಜೋಶಿ, ಶಾಸಕ ದೇಸಾಯಿ

ಧಾರವಾಡ: ತಾಲೂಕಿನ ಕೋಟೂರು ಗ್ರಾಮದಲ್ಲಿ ನಿನ್ನೆ ತಡರಾತ್ರಿ ಬಿಜೆಪಿ ಯುವ ಮುಖಂಡ ಹಾಗೂ ಕೋಟೂರು ಗ್ರಾಮ ಪಂಚಾಯ್ತಿ ಉಪಾಧ್ಯಕ್ಷ ಪ್ರವೀಣ ಕಮ್ಮಾರ ಎಂಬುವವರ ಹತ್ಯೆಯಾಗಿದ್ದು, ಎಸ್‌ಡಿಎಂ ಆಸ್ಪತ್ರೆಗೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಶಾಸಕ ಅಮೃತ ದೇಸಾಯಿ ಅವರು ಭೇಟಿ ನೀಡಿದ್ದಾರೆ.

ರಾಜಕೀಯ ವಿಷಯವಾಗಿಯೇ ಈ ಹತ್ಯೆ ನಡೆದಿರಬಹುದು ಎಂದು ಶಂಕಿಸಲಾಗಿದೆ. ಪ್ರವೀಣ ಕಮ್ಮಾರ ಬಿಜೆಪಿ ಪಾಳೆಯದಲ್ಲಿ ಗುರುತಿಸಿಕೊಂಡಿದ್ದ.

ನಿನ್ನೆ ತಾನೆ ಅಮೃತ ದೇಸಾಯಿ ಅವರ ನಾಮಪತ್ರ ಸಲ್ಲಿಕೆಯ ರ್ಯಾಲಿಯಲ್ಲೂ ಭಾಗಿಯಾಗಿದ್ದ. ಆದರೆ, ಅದೇ ದಿನ ರಾತ್ರಿ ಕೋಟೂರಿನಲ್ಲಿ ನಡೆದ ಜಗಳದಲ್ಲಿ ದುಷ್ಕರ್ಮಿಗಳು ಪ್ರವೀಣ ಕಮ್ಮಾರನಿಗೆ ಚಾಕುವಿನಿಂದ ಇರಿದು ಕೊಲೆ ಮಾಡಿ ಪರಾರಿಯಾಗಿದ್ದಾರೆ.



ತೀವ್ರವಾಗಿ ಗಾಯಗೊಂಡಿದ್ದ ಪ್ರವೀಣನನ್ನು ಚಿಕಿತ್ಸೆಗಾಗಿ ಎಸ್‌ಡಿಎಂ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಆದರೆ, ಚಿಕಿತ್ಸೆಗೆ ಸ್ಪಂದಿಸದ ಪ್ರವೀಣ ಸಾವನ್ನಪ್ಪಿದ್ದು, ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹಾಗೂ ಶಾಸಕ ಅಮೃತ ದೇಸಾಯಿ ಅವರು ಆಸ್ಪತ್ರೆಗೆ ಭೇಟಿ ನೀಡಿ ಬಿಜೆಪಿ ಯುವ ಮುಖಂಡನ ಅಂತಿಮ ದರ್ಶನ ಪಡೆದರು.

ಇತ್ತ ಕೋಟೂರಿನಲ್ಲಿ ನೀರವ ಮೌನ ಆವರಿಸಿದ್ದು, ಸ್ಥಳಕ್ಕೆ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಲೋಕೇಶ ಜಗಲಾಸರ್ ಕೂಡ ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ. ಅಲ್ಲದೇ ಚುನಾವಣೆ ಸಂದರ್ಭದಲ್ಲಿಯೇ ಈ ಹತ್ಯೆ ನಡೆದಿದ್ದು, ಯಾವುದೇ ಗಲಾಟೆಗಳು ಉಂಟಾಗದಂತೆ ಗ್ರಾಮದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿದೆ.

ಹತ್ಯೆ ಆರೋಪಿಗಳ ಪತ್ತೆಗಾಗಿ ಜಾಲ ಬೀಸಲಾಗಿದ್ದು, ತಂಡವನ್ನು ಕೂಡ ರಚನೆ ಮಾಡಲಾಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089